# ಸುವರ್ಣ ಜನನಿ

ನೇರ ದಿಟ್ಟ ಕನ್ನಡ ದಿನ ಪತ್ರಿಕೆ

Suvarn Janani

kannada Daily

ಡಾ.ಪ್ರವೀಣ ಪಾಟೀಲ ಸಾರಥ್ಯದಲ್ಲಿ.....

suvarnjananinews2022@gmail.com

ದೂರವಾಣಿ : 9742347569




ಸಂಪುಟ : 02 | ಸಂಚಿಕೆ : 59 | RNI .No. KARKAN/ 2022/82457 | ದಿ : 19-10-2024 | ಶನಿವಾರ | ಪುಟ : 4 | ಬೆಲೆ : ರೂ : 5

# 'ಸಿದ್ದರಾಮಯ್ಯ ಪತ್ನಿಯ ಸೈಟ್ ಮೂಲ ದಾಖಲೆ ಕೊಡಿ' ವೈಟ್ನರ್ ಹಾಕಿದ್ದ ಡಾಕ್ಯುಮೆಂಟ್ ಕೊಡುವಂತೆ ಇಡಿ ಸೂಚನೆ

ಮೈಸೂರು, ಅ.18- ಸಿಎಂ ಸಿದ್ದರಾಮಯ್ಯ ವಿರುದ್ಧದ ಮುಡಾ ಸೈಟ್ ಹಂಚಿಕೆ ಹಗರಣದ ತನಿಖೆ ಚುರುಕುಗೊಂಡಿದೆ. ಲೋಕಾಯುಕ್ತ ತನಿಖೆ ಕುಂಟುತ್ತಾ ಸಾಗುತ್ತಿದೆ ಎನ್ನುವಾಗಲೇ, ಇಡಿ ಅಧಿಕಾರಿಗಳು ಇಂದು ಭರ್ಜರಿ ರೇಡ್ ಮಾಡಿದ್ದಾರೆ. ಮೈಸೂರಿನ ಮುಡಾ ಕಚೇರಿಯಲ್ಲಿ ಬೀಡು ಬಿಟ್ಟಿರುವ ಇಡಿ ಅಧಿಕಾ-ರಿಗಳು, ಇದೀಗ ಸಿಎಂ ಸಿದ್ದರಾಮಯ್ಯ ಅವರ ಪತ್ನಿ ಸೈಟ್‌ನ ಮೂಲ ದಾಖಲೆ ಮೇಲೆ ಕಣ್ಣಿಟ್ಟಿದ್ದಾರೆ. ಸಿದ್ದರಾಮಯ್ಯ ಪತ್ನಿ ಪಾರ್ವತಿ ಅವರ ಸೈಟ್ಗಳ ಮೂಲ ದಾಖಲೆ ಕೊಡುವಂತೆ ಮುಡಾ ಅಧಿಕಾ-ರಿಗಳಿಗೆ ಇಡಿ ಅಧಿಕಾರಿಗಳು ಸೂಚನೆ ನೀಡಿದ್ದಾರೆ.

ಮುಡಾ ಆಯುಕ್ತ ಹಾಗು ಕಾರ್ಯದರ್ಶಿಗೆ ಇಡಿ ಕ್ಲಾಸ್ ತೆಗೆದುಕೊಂಡಿದ್ದು, ಇಡಿ ಅಧಿಕಾ-ರಿಗಳ ಪ್ರಶ್ನೆಗೆ ಮುಡಾ ಅಧಿಕಾ-ರಿಗಳು ತಬ್ಬಿಬ್ಬಾಗಿದ್ದಾರೆ ಎನ್ನಲಾಗಿದೆ. ಸಿದ್ದರಾಮಯ್ಯ ಅವರ ಪತ್ನಿ ಶ್ರೀಮತಿ ಪಾರ್ವತಿ ಅವ್ರ ಸೈಟು ಮೂಲ

## ಸಿಎಂ ಪತ್ನಿ ಸೈಟ್ ದಾಖಲೆ ಕೊಡಿ



ದಾಖಲಾತಿ ಕೊಡಿ. ವೈಟ್ನರ್ ಹಾಕಿದ್ದ ದಾಖಲೆ ಕೊಡಿ. ಮೂಲ ದಾಖಲೆ ಎಲ್ಲಿದೆ ಅಂತ ಪ್ರಶ್ನಿಸಿದ್ದಾರೆ.

ಎಲ್ಲ ಸರಿಯಾದ ದಾಖಲೆ ಕೊಡಿ, ಇಲ್ಲದಿದ್ದರೆ ಸೂಕ್ತ ಕ್ರಮ ಕೈಗೊಳ್ಳಬೇಕಾಗುತ್ತದೆ ಅಂತ ಇಡಿ ಅಧಿಕಾರಿಗಳು ಎಚ್ಚರಿಸಿದ್ದಾರೆ. ನಾವು ಹೊಸಬರು ಸರ್, ಕಳೆದ ತಿಂಗಳಷ್ಟೇ ಹೊಸದಾಗಿ ಮುಡಾಗೆ ಬಂದಿದ್ದೇವೆ. ನಮಗೂ ಇದಕ್ಕೂ ಸಂಬಂಧವಿಲ್ಲ. ದಯಮಾಡಿ ಈ ವಿಚಾರದಲ್ಲಿ ನಮ್ಮನ್ನು ಬಿಡಿ. ಇಲ್ಲಿರುವ ದಾಖಲೆಗಳನ್ನು ಕೊಡ್ತೇವೆ. ನೀವು ಕೇಳಿದ ಕೆಲ ದಾಖಲೆಗಳ ಪೈಕಿ ಇರುವ ದಾಖಲೆಯನ್ನು ಕೊಡ್ತೀವಿ ಅಂತ ಮುಡಾ ಅಧಿಕಾರಿಗಳು ಇಡಿ ಅಧಿಕಾರಿಗಳ ಮುಂದೆ ಮನವಿ ಮಾಡಿದ್ದಾರೆ ಎನ್ನಲಾಗಿದೆ.

ಇನ್ನು ಇಡಿ ಅಧಿಕಾರಿಗಳ ಪ್ರಶ್ನೆಗಳಿಗೆ ಮುಡಾ ಅಧಿಕಾರಿಗಳು ಕಂಗಾಲಾಗಿದ್ದಾರೆ. 2010ರವರೆಗೆ 800 ಪುಟಗಳ ದಾಖಲಾತಿಗಳ ಜೆರಾಕ್ಸ್ ಪ್ರತಿಗಳನ್ನು ಮುಡಾ ಅಧಿಕಾರಿಗಳು ನೀಡಿದ್ದಾರಂತೆ. ಆದರೆ ನಮಗೆ ಈ ದಾಖಲಾತಿ ಬೇಡ. ಪಾರ್ವತಿ ಅವ-ರಿಗೆ ಸೈಟು ವರ್ಗಾವಣೆಯಾದ ದಾಖಲೆ ಕೊಡಿ. 50:50 ಅನುಪಾತದ ಅಡಿಯಲ್ಲಿ ಹಂಚಿಕೆಯಾಗಿರುವ ದಾಖಲೆ ಕೊಡಿ ಅಂತ ಖಡಕ್

3 ಬಾರಿ ನೋಟಿಸ್ ಕೊಟ್ಟಿದ್ವಿ. 1 ಬಾರಿ ಶೋಕಾಸ್ ನೋಟಿಸ್ ಕೊಟ್ಟಿದ್ವಿ. ಆದ್ರೆ ಯಾವುದಕ್ಕೂ ನಿಮ್ಮಿಂದ ಪ್ರತಿಕ್ರಿಯೆ ಬರಲಿಲ್ಲ ಯಾಕೆ ಅಂತ ಮುಡಾ ಅಧಿಕಾ-ರಿಗಳನ್ನು ಪ್ರಶ್ನಿಸಿದ್ದಾರೆ. ಇಡಿ ಅಧಿಕಾ-ರಿಗಳು ಎಂದ್ರೆ ತಾತ್ಸಾರವೇ ಅಂತ ಇಡಿ ಅಧಿಕಾರಿಗಳು ಖಾರವಾಗಿ ಪ್ರಶ್ನಿಸಿದ್ದಾರೆ. ಇನ್ನು ಇಡಿ ಅಧಿಕಾರಿಗಳ ಪ್ರಶ್ನೆಗೆ ಮುಡಾ ಅಧಿಕಾರಿಗಳು ತತ್ತರಿಸಿದ್ದಾರೆ ಎನ್ನಲಾಗಿದೆ.

# ಡಿ.9ರಿಂದ ಚಳಿಗಾಲದ ಅಧಿವೇಶನ ಸಾಧ್ಯತೆ



ಬೆಳಗಾವಿ, ಅ.18- ಬೆಳಗಾವಿ ಚಳಿಗಾಲದ ಅಧಿವೇಶನದ ಅಧಿಕೃತ ದಿನಾಂಕವನ್ನು ಸರ್ಕಾರವೇ ಪ್ರಕಟಿಸಲಿದ್ದು, ಸಿದ್ಧತೆ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದೇವೆ ಎಂದು ವಿಧಾನಸಭೆ ಸಭಾಧ್ಯಕ್ಷ ಯು.ಟಿ.ಖಾದರ್ ತಿಳಿಸಿದ್ದಾರೆ.

ಬೆಳಗಾವಿ ಸುವರ್ಣ ವಿಧಾನಸೌಧದಲ್ಲಿಂದು ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಅಧಿವೇಶನ ಯಶಸ್ವಿಯಾಗಲು ಎಲ್ಲರ ಸಹಕಾರ ಅಗತ್ಯ. ಜಿಲ್ಲಾಧಿಕಾರಿ ನೇತೃತ್ವದಲ್ಲಿ ಅಧಿವೇಶನದ ಸಿದ್ಧತೆ ನಡೆಯಲಿದೆ. ಎಲ್ಲರೂ ಟೀಂ ವರ್ಕ್ ಆಗಿ ಕೆಲಸ ಮಾಡಲು ಸೂಚನೆ ನೀಡಲಾಗಿದೆ ಎಂದರು.

ಉತ್ತರ ಕರ್ನಾಟಕದ ಸಮಸ್ಯೆಗಳ ಬಗ್ಗೆ ಚರ್ಚಿಸಲು ಹೆಚ್ಚಿನ ಸಮಯ ಮೀಸಲಿಡುತ್ತೇವೆ. ಕಳೆದ ಬಾರಿಯೂ ನಾಲ್ಕು ದಿನಕ್ಕೆ ಅವಕಾಶ ನೀಡಲಾಗಿದೆ ಎಂದು ಹೇಳಿದ ಖಾದರ್, ಅಧಿವೇಶನ ನೋಡಲು ಎಲ್ಲ ವರ್ಗದ ಜನರಿಗೂ ಅವಕಾಶ ನೀಡಲಾಗುವುದು. ಸುಲಭವಾಗಿ ಎಲ್ಲರಿಗೂ ಪಾಸ್ ಸಿಗಬೇಕು ಎಂಬುದು ನಮ್ಮ ಆಶಯ. ಶಾಲಾ, ಕಾಲೇಜಿನ ಮಕ್ಕಳು ಸಹ ಹೆಚ್ಚಿನ ಸಂಖ್ಯೆಯಲ್ಲಿ ಬರಲಿದ್ದಾರೆ ಎಂದು ತಿಳಿಸಿದರು.

ಇನ್ನು, ಕಾಂಗ್ರೆಸ್ ಅಧಿವೇಶನದ ನೂರು ವರ್ಷದ ಕಾರ್ಯಕ್ರಮ ಹಾಗೂ ಕಿತ್ತೂರು ವಿಜಯೋತ್ಸವ 200ನೇ ವರ್ಷಾಚರಣೆ ಹಿನ್ನೆಲೆಯಲ್ಲಿ ಅಧಿವೇಶಕ್ಕೆ ಬರುವ ಮಕ್ಕಳಿಗೆ ಈ ಎರಡು ಘಟನೆಗಳ ಮಹತ್ವ ತಿಳಿಸುತ್ತೇವೆ. ಅದೇ ರೀತಿ ಛಾಯಾಚಿತ್ರ ಪ್ರದರ್ಶನ ಏರ್ಪಡಿಸಲಾಗುವುದು ಎಂದರು.

ಸುವರ್ಣ ವಿಧಾನಸೌಧ ಮುಂಭಾಗದಲ್ಲಿ ಮಹಾತ್ಮಾ ಗಾಂಧಿ ಪ್ರತಿಮೆ ಈ ವರ್ಷ ಸ್ಥಾಪನೆ ಆಗಲಿದೆ. ಜೊತೆಗೆ ಸತ್ಯಮೇವ ಜಯತೇಯನ್ನು ಬರೆಸಲು ಸೂಚಿಸಲಾಗಿದೆ ಎಂದು ಮಾಹಿತಿ ನೀಡಿದರು.

ಅಧಿವೇಶನದ ಸಂದಭ ರ್ದಲ್ಲಿ ದುಂದುವೆಚ್ಚಗಳಿಗೆ ಕಡಿವಾಣ ಹಾಕಲಾಗುವುದು. ಪ್ರತಿಭಟನೆಗಳಿಗೆ ಪ್ರತಿ ಬಾರಿಯಂತೆ ಅವಕಾಶ ನೀಡಲಾಗುವುದು. ಪ್ರಮುಖ ಸಮಸ್ಯೆಗಳ ಕುರಿತು ಆಯಾ ಇಲಾಖೆಯ ಸಚಿವರ ಮಟ್ಟದಲ್ಲಿ ಚರ್ಚೆ ನಡೆಸಲು ನಿರ್ದೇಶನ ನೀಡಲಾಗುವುದು ಎಂದು ಯು.ಟಿ.ಖಾದರ್ ಹೇಳಿದರು.

ವಿಧಾನ ಪರಿಷತ್ ಸಭಾಧ್ಯಕ್ಷ ಬಸವರಾಜ ಹೊರಟ್ಟಿ ಮಾತನಾಡಿ, ಕಳೆದ ವರ್ಷದ ಸಣ್ಣಪುಟ್ಟ ಸಮಸ್ಯೆಗಳನ್ನು ಇತ್ಯರ್ಥಪಡಿಸುತ್ತೇವೆ. ಬೆಳಗಾವಿ ಅಧಿವೇಶನವನ್ನು ಉತ್ತಮ ರೀತಿಯಲ್ಲಿ ನಡೆಸಲು ಚರ್ಚಿಸಲಾಗಿದೆ. ಸಭೆಯಲ್ಲಿ ಆಗುವ ಚರ್ಚೆಗಳನ್ನು ಜಾರಿಗೆ ತರಲು ಜಿಲ್ಲಾಧಿಕಾರಿಗೆ ಸೂಚನೆ ನೀಡಲಾಗಿದೆ ಎಂದು ತಿಳಿಸಿದರು.

## ಫಲಿತಾಂಶ ಸುಧಾರಣೆಗೆ ಶಿಕ್ಷ ಕೋಪೈಲಟ್ ಯೋಜನೆ

ಬೆಂಗಳೂರು, ಅ.18- ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯು, ಶಿಕ್ಷಣ ಫೌಂಡೇಶನ್ ಮತ್ತು ಮೈಕ್ರೋಸಾಫ್ಟ್ ರಿಸರ್ಚ್ ಇಂಡಿಯಾದ ಸಹಯೋಗದೊಂದಿಗೆ ಸರಕಾರಿ ಶಾಲೆಗಳಲ್ಲಿ ಕಲಿಕೆಯ ಫಲಿತಾಂಶಗಳನ್ನು ಸುಧಾರಿಸುವ ಗು-ರಿಯೊಂದಿಗೆ ಶಿಕ್ಷ ಕೋಪೈಲಟ್ ಯೋಜನೆಯನ್ನು ಜಾರಿಗೆ ತರಲಾಗಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವ ಮಧು ಬಂಗಾರಪ್ಪ ತಿಳಿಸಿದರು.

ಶುಕ್ರವಾರ ವಿಧಾನ ಸೌಧದ ಸಮಿತಿ ಕೊಠಡಿಯಲ್ಲಿಶಿಕ್ಷ ಕೋಪೈಲಟ್ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಸ್ಥಳೀಯ ಪಠ್ಯಕ್ರಮ, ಭಾಷೆ ಮತ್ತು ಸಂದರ್ಭವನ್ನು ಆಧರಿಸಿ ಸಮಗ್ರ ಬೋಧನಾ ಸಂಪನ್ಮೂಲಗಳು ಮತ್ತು ಕಲಿಕೆಯ ಅನುಭವಗಳನ್ನು ರಚಿಸಲು ಶಿಕ್ಷ ಕೋಪೈಲಟ್ ಯೋಜನೆ ಶಿಕ್ಷಕರನ್ನು ಸಶಕ್ತಗೊಳಿಸುತ್ತದೆ. ರಾಜ್ಯದ ನಗರ ಮತ್ತು ಗ್ರಾಮೀಣ ಭಾಗಗಳ ಎಲ್ಲಾ ಶೈಕ್ಷಣಿಕ ಜಿಲ್ಲೆಗಳಲ್ಲಿ 750ಕ್ಕೂ ಹೆಚ್ಚು ಸರಕಾರಿ ಶಾಲೆಗಳಿಂದ ಆಯ್ದ 1000 ಶಿಕ್ಷಕರಿಗೆ ಶಿಕ್ಷ ಕೋಪೈಲಟ್ -ಎಐ ಚಾಲಿತ ಡಿಜಿಟಲ್ ಸಹಾಯವನ್ನು ನೀಡಲಾಗುವುದು ಎಂದು ತಿಳಿಸಿದರು.

## 'ಕಾಂಗ್ರೆಸ್ ಸರ್ಕಾರ ಕೆಡವಲು 1 ಸಾವಿರ ಕೋಟಿ' ಹೇಳಿಕೆ: ಯತ್ನಾಳ್ ವಿರುದ್ಧ ಎಫ್ಐಆರ್

**ದಾವಣಗೆರೆ, ಅ.18- ರಾಜ್ಯ ಸರ್ಕಾರವನ್ನು ಕೆಡವಲು ಒಂದು ಸಾವಿರ ಕೋಟಿ ರೂಪಾಯಿಯನ್ನು ಪಕ್ಷದ ಕೆಲ ನಾಯಕರು ಸಂಗ್ರಹಿಸಿ ಇಟ್ಟುಕೊಂಡಿದ್ದಾರೆ ಎಂದು ಹೇಳಿಕೆ ನೀಡಿದ್ದ ಸಂಬಂಧ ಬಿಜೆಪಿ ಶಾಸಕ ಬಸನಗೌಡ ಯತ್ನಾಳ್ ಎಫ್ಐಆರ್ ದಾಖಲಾಗಿದೆ.**

ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಎಸ್.ಮನೋಹರ್ ನೀಡಿರುವ ದೂರಿನ ಅನ್ವಯ ದಾವಣಗೆರೆಯ ಗಾಂಧಿನಗರ ಪೊಲೀಸ್ ಠಾಣೆಯಲ್ಲಿ ಎಫ್ಐಆರ್ ದಾಖಲಾಗಿದೆ. ಎಸ್. ಮನೋಹರ್ ಬೆಂಗಳೂರಿನ ಹೈಗ್ರೌಂಡ್ಸ್ ಠಾಣೆಯಲ್ಲಿ ದೂರು ದಾಖಲು ಮಾಡಿದ್ದರು. ಈ ಪ್ರಕರಣವನ್ನು ದಾವಣಗೆರೆಯ ಗಾಂಧಿನಗರ ಪೊಲೀಸ್ ಠಾಣೆಗೆ ವರ್ಗಾವಣೆ ಮಾಡಲಾಗಿದೆ.

ಸೆ.29ರಂದು ದಾವಣಗೆರೆಯ ಜಿಎಂಐಟಿಯಲ್ಲಿ ಬಿಜೆಪಿಯ ಅತೃಪ್ತ ನಾಯಕರ ಸಭೆ ಬಳಿಕ 'ರಾಜ್ಯ ಸರ್ಕಾರವನ್ನು ಕೆಡವಲು ಒಂದು ಸಾವಿರ ಕೋಟಿ ರೂಪಾಯಿಯನ್ನು ಪಕ್ಷದ ಕೆಲ ಮುಖಂಡರು ಸಂಗ್ರಹಿಸಿ ಇಟ್ಟುಕೊಂಡಿದ್ದಾರೆ' ಎಂದು ಶಾಸಕ ಯತ್ನಾಳ್ ಮಾಧ್ಯಮಗಳ ಮುಂದೆ ಗಂಭೀರ ಆರೋಪ ಮಾಡಿದ್ದಾರೆ. ಅವರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ದೂ-ರಿನಲ್ಲಿ ಆಗ್ರಹಿಸಲಾಗಿದೆ.

ಬಿಜೆಪಿ ನಾಯಕರಿಗೆ ಸದ್ಯ ಅಧಿಕಾರವಿಲ್ಲದೇ ಹತಾಶರಾಗಿ, ರಾಜ್ಯ ಸರ್ಕಾರವನ್ನು ಕೆಡವಲು ಸಂಚು ಮಾಡಿದ್ದಾರೆ. ಭ್ರಷ್ಟಾಚಾರ ಹಾಗೂ ಅಕ್ರಮ ಹಣ ವರ್ಗಾವಣೆ ಆಗಿರುವ ಸಂದೇಹವಿದೆ. ಈ ಹಿನ್ನೆಲೆಯಲ್ಲಿ 2024ರ ಡಿಸೆಂಬರ್ ತಿಂಗಳಿನಲ್ಲಿ ರಾಜಕೀಯ ಕ್ರಾಂತಿ ಉಂಟಾಗಿ, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಪತನವಾಗುತ್ತದೆ ಎಂದು ಯತ್ನಾಳ್ ಹೇಳಿಕೆ ನೀಡಿದ್ದಾರೆ ಎಂದು ದೂರಿನಲ್ಲಿ ಎಸ್. ಮನೋಹರ್ ತಿಳಿಸಿದ್ದಾರೆ.


ಸಾವಿರ ಕೋಟಿ ರೂಪಾಯಿ ಹಣ ಸಂಗ್ರಹಿಸಿ ಇಟ್ಟುಕೊಂಡಿರುವವರು ಯಾರು ಎಂಬ ಮಾಧ್ಯಮದವರ ಪ್ರಶ್ನೆಗೆ, 'ನೀವೇ ಊಹೆ ಮಾಡಿ' ಎಂದು ಯತ್ನಾಳ್ ಉತ್ತರ ನೀಡಿದ್ದಾರೆ. ಅಲ್ಲದೇ, ಹಣ ಸಂಗ್ರಹಿಸಿರುವ ನಾಯಕರ ಮನೆಯಲ್ಲಿ, ನೋಟು ಎಣಿಸುವ ಮಷಿನ್ ಪತ್ತೆಯಾಗಿತ್ತು ಎಂದು ಸಹ ಹೇಳಿದ್ದಾರೆ. ಸಭೆಯ ನಂತರ ಇಂತಹ ಹೇಳಿಕೆಯನ್ನು ಯತ್ನಾಳ್ ನೀಡಿದ್ದು, ಈ ವಿಚಾರವಾಗಿ ಸಭೆಯಲ್ಲಿ ಇದ್ದಂತಹ ಎಲ್ಲ ನಾಯಕರುಗಳಿಗೂ ಗೊತ್ತಿದೆ. ಹೀಗಾಗಿ, ಚರ್ಚೆ ಮಾಡಿಯೇ ಮಾಧ್ಯಮಗಳಿಗೆ ತಿಳಿಸಲು ಸಹಮತ ವ್ಯಕ್ತವಾಗಿರುವುದು ಕಾಣುತ್ತಿದೆ ಎಂದು ಎಸ್. ಮನೋಹರ್ ದೂರಿದ್ದಾರೆ.

# ಉದ್ಯಮಿ ಕೊಲೆ ಕೇಸ್: ಪತ್ನಿ ಸೇರಿ ಮೂವರು ಆರೋಪಿಗಳ ಬಂಧನ

ಬೆಳಗಾವಿ, ಅ.18- ಬೆಳಗಾವಿ ಉದ್ಯಮಿ ಸಂತೋಷ ದುಂಡಪ್ಪ ಪದ್ಮಣ್ಣವರ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಗುರುವಾರ ಪತ್ನಿ ಸೇರಿ ಮೂವರನ್ನು ಪೊಲೀಸರು ಬಂಧಿಸಿದ್ದು, ಆರೋಪಿಗಳನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ. ಮೂವರನ್ನು ಹಿಂಡಲಗಾದಲ್ಲಿರುವ ಬೆಳಗಾವಿ ಕೇಂದ್ರ ಕಾರಾಗೃಹಕ್ಕೆ ರವಾನಿಸಲಾಗಿದೆ.

ಉದ್ಯಮಿ ಪತ್ನಿ ಉಮಾ ಪದ್ಮಣ್ಣವರ (41), ಅವರ ಫೇಸ್‌ಬುಕ್ ಸ್ನೇಹಿತ, ಕೊಡಗು ಜಿಲ್ಲೆಯ ಶನಿವಾರಸಂತೆ ಗ್ರಾಮದ ಶೋಭಿತ್ ಗೌಡ (30) ಮತ್ತು ಪವನ್ (27) ಬಂಧಿತ ಆರೋಪಿಗಳು. ಕೊಲೆ ಪ್ರಕರಣದಲ್ಲಿ ಮನೆಗೆಲಸದವರಾದ ನಂದಾ ಕುರಿಯಾ, ಪ್ರಕಾಶ ಕುರಿಯಾ ಅವರ ಪಾತ್ರದ ಬಗ್ಗೆ ಪೊಲೀಸರಿಗೆ ಮಾಹಿತಿ ಸಿಕ್ಕಿಲ್ಲ. ಹಾಗಾಗಿ, ಅವರನ್ನು ಬಂಧಿಸಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ.

ತಂದೆ ಕೊಲೆ ಬಗ್ಗೆ ಮಗಳಿಂದಲೇ ದೂರು: ಅಕ್ಟೋಬರ್ 9ರಂದು ಬೆಳಗಾವಿ



ಆಂಜನೇಯ ನಗರದ ನಿವಾಸಿ ಸಂತೋಷ ಪದ್ಮಣ್ಣವರ ಸಾವನ್ನಪ್ಪಿದ್ದರು. ಬಳಿಕ ಅ.10ರಂದು ಸದಾಶಿವನಗರದ ಸ್ಮಶಾನದಲ್ಲಿ ಅಂತ್ಯಕ್ರಿಯೆ ನೆರವೇರಿಸಲಾಗಿತ್ತು. ಆದರೆ, ಬಳಿಕ ತಂದೆಯ ಸಾವಿನ ಬಗ್ಗೆ ಅನುಮಾನದ ಮೇಲೆ ಮಗಳು ಸಂಜನಾ ಮಾಳಮಾರುತಿ ಪೊಲೀಸ್ ಠಾಣೆಗೆ ತೆರಳಿ ದೂರು ದಾಖಲಿಸಿದ್ದರು.

ತಂದೆಯ ಮನೆಗೆ ಯಾರೆಲ್ಲಾ ಬಂದಿದ್ದರು ಎಂದು ಸಂಜನಾ ಸಿಸಿಟಿವಿ ವಿಡಿಯೋ ಪರಿಶೀಲನೆ ಮಾಡಿದ್ದಾರೆ. ಆದರೆ, ಕೆಲವು ದೃಶ್ಯಗಳು ಡಿಲೀಟ್ ಆದ ಹಿನ್ನೆಲೆ ಅನುಮಾನಗೊಂಡ ಸಂಜನಾ, ಅಕ್ಟೋಬರ್ 15ರಂದು ಮಾಳಮಾರುತಿ ಪೊಲೀಸ್ ಠಾಣೆಯಲ್ಲಿ ತಂದೆಯ ಸಾವಿನ ಬಗ್ಗೆ ಅನುಮಾನವಿದ್ದು, ತನಿಖೆ ನಡೆಸಬೇಕು ಎಂದು ದೂರು ನೀಡಿದ್ದರು.

ಪುತ್ರಿ ನೀಡಿದ ದೂರನ್ನು ಗಂಭೀರವಾಗಿ ಪರಿಗಣಿಸಿದ ಮಾಳಮಾರುತಿ ಪೊಲೀಸರು ಸಂತೋಷ ಪದ್ಮಣ್ಣವರ ಮೃತದೇಹವನ್ನು ಹೊರ ತೆಗೆದು ಮರಣೋತ್ತರ ಪರೀಕ್ಷೆಗೆ ಒಳಪಡಿಸಿದ್ದರು. ಸಂಜನಾ, ಬೆಳಗಾವಿ ಎಸಿ ಶ್ರವಣ ನಾಯಕ ಹಾಗೂ ಮಾಳಮಾರುತಿ ಪೊಲೀಸ್ ಠಾಣೆಯ ಸಿಪಿಐ ಸಮ್ಮುಖದಲ್ಲಿ ಮರಣೋತ್ತರ ಪರೀಕ್ಷೆ ನಡೆದಿತ್ತು.

ಇದೀಗ, ಮೂವರು ಆರೋಪಿಗಳನ್ನು ಬಂಧಿಸಲಾಗಿದೆ. ಸಂತೋಷ ಅವರ ಮರಣೋತ್ತರ ಪರೀಕ್ಷೆಯ ವರದಿ ಇನ್ನೂ ಬಂದಿಲ್ಲ. ಆ ವರದಿ ಬಂದ ಬಳಿಕ ಪ್ರಕರಣದ ಸ್ಪಷ್ಟತೆ ಗೊತ್ತಾಗಲಿದೆ ಎಂದು ಪೊಲೀಸರು ಹೇಳಿದ್ದಾರೆ.

## ಸಂವಿಧಾನದ ಆಶಯಕ್ಕೆ ಅನುಗುಣವಾಗಿ ಪಂಚಮಸಾಲಿಗರಿಗೆ ಮೀಸಲಾತಿ

ಬೆಂಗಳೂರು, ಅ.18- ಪ್ರವರ್ಗ-2ಎ ಅಡಿ ಮೀಸಲಾತಿ ಒದಗಿಸುವಂತೆ ಪಂಚಮಸಾಲಿ ಲಿಂಗಾಯತ ಸಮುದಾಯದ ಬೇಡಿಕೆ ಕುರಿತು ಸಿಎಂ ಸಿದ್ದರಾಮಯ್ಯ ಪ್ರತಿಕ್ರಿಯಿಸಿ, ಕಾನೂನು ಪ್ರಕಾರ, ಸಂವಿಧಾನದ ಆಶಯಕ್ಕೆ ಅನುಗುಣವಾಗಿ ತೀರ್ಮಾನ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಗೃಹ ಕಚೇರಿ ಕೃಷ್ಣಾದಲ್ಲಿಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪಂಚಮಸಾಲಿ ಸಮುದಾಯದ ಮೀಸಲಾತಿ ಕುರಿತಾಗಿ ಜಯಮೃತ್ಯುಂಜಯ ಸ್ವಾಮೀಜಿ ನೇತೃತ್ವದ ನಿಯೋಗದೊಂದಿಗೆ ಸಭೆ ನಡೆಸಿದರು.

ಈ ವೇಳೆ ಸಿಎಂ, ಸರ್ಕಾರ ಮೀಸಲಾತಿ ವಿಷಯದಲ್ಲಿ ಮುಕ್ತ ಮನಸ್ಸು ಹೊಂದಿದೆ. ನಮ್ಮ ಸರ್ಕಾರ ಸಾಮಾಜಿಕ ನ್ಯಾಯದ ಪರವಾಗಿದೆ. ಎಲ್ಲ ದುರ್ಬಲ ವರ್ಗದವರಿಗೂ ನ್ಯಾಯ ದೊರೆಯಬೇಕು ಎಂಬುದು ಸರ್ಕಾರದ ನಿಲುವು. ಶಾಶ್ವತವಾದ ಹಿಂದುಳಿದ ವರ್ಗಗಳ ಆಯೋಗವಿದೆ. ಅದರ ಅಂತಿಮ ಶಿಫಾರಸು ಇನ್ನೂ ನಮ್ಮ ಕೈಗೆ ತಲುಪಿಲ್ಲ. ಚುನಾವಣೆ ನೀತಿ ಸಂಹಿತೆ ಇರುವುದರಿಂದ ಮೀಸಲಾತಿ ಕುರಿತಾಗಿ ಅಡ್ವೋಕೇಟ್ ಜನರಲ್, ಕಾನೂನು ಇಲಾಖೆ, ತಜ್ಞರೊಂದಿಗೆ, ಸಂಪುಟದಲ್ಲಿ ಚರ್ಚಿಸಿ ಕ್ರಮ ಕೈಗೊಳ್ಳಲಾಗುವುದು. ಈಗಲೇ ಯಾವುದೇ ತೀರ್ಮಾನ ಕೈಗೊಳ್ಳಲು ಸಾಧ್ಯವಿಲ್ಲ ಎಂದರು.

# ಸೂರ್ಯ ಫೌಂಡೇಶನ್ ನಿಂದ ಮಹತ್ತರ ಹೆಜ್ಜೆ ರಾಜ್ಯಮಟ್ಟದ ಶೈಕ್ಷಣಿಕ ಸಮ್ಮೇಳನ ಯಶಸ್ವಿ

ಬೆಂಗಳೂರು: ಭಾರತವು ವೇಗವಾಗಿ ಬೆಳೆಯುತ್ತಿರುವ ಆರ್ಥಿಕತೆಯಾಗಿದೆ. ನಿರುದ್ಯೋಗ ಕ್ಷೇತ್ರದಲ್ಲಿ ಸುಧಾರಣೆಗೆ ಅಗಾಧ ಅವಕಾಶವಿದ್ದು, ನಾಡಿನ ನಿರುದ್ಯೋಗಿ ಯುವಕ,

ಯುವತಿಯರಿಗೆ ಮತ್ತು ಪದವೀಧರ-ರಿಗೆ ವಿವಿಧ ಪ್ರತಿಷ್ಠಿತ ಕಂಪನಿಗಳ ಮೂಲಕ ಉದ್ಯೋಗಾವಕಾಶ ಕಲ್ಪಿಸಿ, ಕುಟುಂಬದ ಆರ್ಥಿಕತೆಯನ್ನು ಬಲಪಡಿಸುವದೇ ನಮ್ಮ ಸೂರ್ಯ ಫೌಂಡೇಶನ್ ಮುಖ್ಯ ಗುರಿಯಾಗಿದೆ ಎಂದು ಸೂರ್ಯ ಫೌಂಡೇಶನ್ ಸಂಸ್ಥಾಪಕ ಅಧ್ಯಕ್ಷ ಸೋಮೇಶ್ ನವೋದಯ ಹೇಳಿದರು.

ಅವರು ನಗರದ ಹೆಸರಘಟ್ಟದ ಹುರುಳಿ ಚಿಕ್ಕನಹಳ್ಳಿಯಲ್ಲಿರುವ ಇಂಡೋಗ್ಲೋಬ್ ಶಿಕ್ಷಣ ಸಂಸ್ಥೆಯಲ್ಲಿ

ಬೆಂಗಳೂರಿನ ಸೂರ್ಯ ಫೌಂಡೇಶನ್ ಹಾಗೂ ಸ್ಪಾರ್ಕ್ ಅಕಾಡೆಮಿ, ಇಂಡೋಗ್ಲೋಬ್ ಇನ್ ಸ್ಟಿಟ್ಯೂಷನ್ ಹಾಗೂ ಮೈಸೂರಿನ ಕರ್ನಾಟಕ ರಾಜ್ಯ ಶಿಕ್ಷಕರ ಪ್ರತಿಭಾ ಪರಿಷತ್ ಸಹಯೋಗದಲ್ಲಿ ಜರುಗಿದ 'ರಾಜ್ಯ ಮಟ್ಟದ ಶೈಕ್ಷಣಿಕ ಸಮ್ಮೇಳನ'ದ ಎರಡನೇ ದಿನದ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಸೂರ್ಯ ಫೌಂಡೇಶನ್ ಮೂಲಕ ನಿರುದ್ಯೋಗಿ ಯುವಕರಿಗೆ ಅವರ ಇಚ್ಚೆಯನುಸಾರ ಉದ್ಯೋಗಕ್ಕೆ ಸಂಬಂಧಿತ ಕೌಶಲ್ಯಗಳು ಮತ್ತು ತರಬೇತಿಯನ್ನು ನೀಡಿ, ಸ್ವಯಂ ಪ್ರೇರಿತರಾಗಿ ಉದ್ಯೋಗದಲ್ಲಿ ತೊಡಗಿಸಿಕೊಳ್ಳುವ ಅವಕಾಶವನ್ನು ಕಲ್ಪಿಸಲಾಗುತ್ತದೆ. ನಾಡಿನ ಎಲ್ಲ ವಿದ್ಯಾವಂತ ನಿರುದ್ಯೋಗಿ ಯುವಕರು ಹಾಗೂ ಪದವೀಧರರು



ಈ ಅವಕಾಶದ ಸದುಪಯೋಗ ಮಾಡಿಕೊಂಡು, ತಮ್ಮ ಕುಟುಂಬದ ಆರ್ಥಿಕ ಬೆನ್ನೆಲುಬಾಗಿ ಪರಿವರ್ತನೆ ಹೊಂದಬೇಕು ಎಂದು ಹೇಳಿದರು.

ಈ ಶೈಕ್ಷಣಿಕ ಸಮ್ಮೇಳನದ ಮೂಲಕ ರಾಜ್ಯದ ವಿವಿಧ ಜಿಲ್ಲಾ ಸಂಯೋಜಕರು,ತಾಲೂಕು ಪ್ರಧಾನ ಸಂಯೋಜಕರು ಮತ್ತು ತಾಲೂಕು ಸಂಯೋಜ-ಕರುಗಳಿಗೆ 'ರಾಜ್ಯ ಮಟ್ಟದ

ಶಿಕ್ಷಣ ಸೇವಾ ರತ್ನ' ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು. ಅದೇ ರೀತಿಯಲ್ಲಿ 11 ವಿಭಾಗದಲ್ಲಿ 240 ಸಾಧಕರಿಗೆ ರಾಜ್ಯ ಮಟ್ಟದ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.

ಅಧ್ಯಕ್ಷತೆ ವಹಿಸಿದ್ದ ಬೆಂಗಳೂರಿನ ಇಂ-ಡೋಗ್ಲೋಬ್ ಇನ್ ಸ್ಟಿಟ್ಯೂಷನ್ ಸಂಸ್ಥಾಪಕ ಅಧ್ಯಕ್ಷರಾದ ಟಿ ಎಂ ಗೌಡ ಮಾತನಾಡಿ, ಇಂದಿನ ದಿನಗಳಲ್ಲಿ ಉದ್ಯೋಗಾವಕಾಶ ಮ-ರಿಚೀಕೆಯಾಗುತ್ತಿರುವ ಸಂದರ್ಭದಲ್ಲಿ ಸೂರ್ಯ ಫೌಂಡೇಶನ್ ಮಹತ್ತರ ಹೆಜ್ಜೆಯನ್ನಿಟ್ಟು, ನಿರುದ್ಯೋಗಿಗಳ ಪಾಲಿಗೆ ಆಶಾಕಿರಣವಾಗಿದೆ. ಇದರ ಸದುಪಯೋಗ ಇಡೀ ರಾಜ್ಯದ ಮೂಲೆ ಮೂಲೆಗೂ ತಲುಪಲಿ ಎಂದು ಆಶಿಸಿದರು.

ಇದೇ ಸಂದರ್ಭದಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಿಂದ ಆಯ್ಕೆಯಾದ ಪ್ರತಿಭಾನ್ವಿತ ಉತ್ತಮ ಪ್ರಾಥಮಿಕ ಶಾಲಾ ಶಿಕ್ಷಕರಿಗೆ, ಉತ್ತಮ ಶಾಲಾ-ಕಾಲೇಜುಗಳಿಗೆ, ಉತ್ತಮ ತರಬೇತುದಾರರಿಗೆ, ಉತ್ತಮ ನಿರೂಪಕ ಶಿಕ್ಷಕರಿಗೆ,

ಅತ್ಯುತ್ತಮ ಶಾಲೆಗಳಿಗೆ, ಉತ್ತಮ ಉಪನ್ಯಾಸಕರಿಗೆ,

ಉತ್ತಮ ಪ್ರೌಢಶಾಲಾ ಶಿಕ್ಷಕರಿಗೆ, ಉತ್ತಮ ಮುಖ್ಯ ಶಿಕ್ಷಕರಿಗೆ ಉತ್ತಮ ಸಿಆರ್ಪಿ, ಬಿಆರ್ಪಿ, ಬಿಐಆರ್ಟಿ ಗಳಿಗೆ, ಸಾಧಕ ಮಹಿಳೆಯರಿಗೆ, ಯುವ ಸಾಧಕರಿಗೆ ಸೂರ್ಯ ಫೌಂಡೇಶನ್ ವತಿಯಿಂದ ರಾಜ್ಯ ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು.

ಸಮಾರಂಭದಲ್ಲಿ ಸುವರ್ಣ ಕರ್ನಾಟಕ ಡಿಜಿಟಲ್ ಮೀಡಿಯಾ ಅಸೋಷಿಯೇಷನ್ ಅಧ್ಯಕ್ಷರಾದ ಗಂಡಸಿ ಸದಾನಂದಸ್ವಾಮಿ, ಮೈಸೂ-ರಿನ ಕರ್ನಾಟಕ ರಾಜ್ಯ ಶಿಕ್ಷಕರ ಪ್ರತಿಭಾ ಪರಿಷತ್ತಿನ ಅಧ್ಯಕ್ಷ ಪಿ ಮಹೇಶ್, ಮುಖ್ಯ ಅತಿಥಿಗಳಾಗಿ ಬೆಂಗಳೂರಿನ ಎಜಿಎಸ್ ಕಾರ್ಟ್ ಪ್ರೈ,ಲಿ.ನ ಸಂಸ್ಥಾಪಕರಾದ ವಿನಯಕುಮಾರ್ ಹಾಗೂ ದೀಲಿಪ್ ಕುಮಾರ್ ಆರ್, ವೃದ್ಧಿ ಲರ್ನಿಂಗ್ ಎಕ್ಸ್ ಚೇಂಜ್ ನ ಸಂಸ್ಥಾಪಕರಾದ ಸಂದೀಪ್ ವಿಜಯನ್ ಆಗಮಿಸಿದ್ದರು.

ಕರ್ನಾಟಕ ರಾಜ್ಯ ಶಿಕ್ಷಕರ ಪ್ರತಿಭಾ ಪರಿಷತ್ತಿನ ರಾಜ್ಯ ಪ್ರಧಾನ ಕಾರ್ಯದರ್ಶಿ ಸಂತೋಷಕುಮಾರ ಎಸ್ ಬಂಡೆ, ರಾಜ್ಯ ಉಪಾಧ್ಯಕ್ಷರಾದ ವ್ಹಿ ಜಿ ಅಗ್ರಹಾರ, ರೇಖಾ ದಳವಾಯಿ, ಹಿರಿಯ ನಿರ್ದೇಶಕ ನಾಗಪ್ಪ ಮುಶೆಪ್ಪನವರ, ರಾಜ್ಯ ತಾಂತ್ರಿಕ ವಿಭಾಗದ ಮುಖ್ಯಸ್ಥ ಚಂದ್ರಶೇಖರ್ ನಾಯಕ್, ರಾಜ್ಯ ಸಹಕಾರ ಸಮಿತಿಯ ಮುಖ್ಯಸ್ಥೆ ಉಮಾ ಗುಡ್ಡದ ಸೇರಿದಂತೆ ಪ್ರತಿಭಾ ಪರಿಷತ್ತಿನ ವಿವಿಧ ಸಮಿತಿಯ ಮುಖ್ಯಸ್ಥರು, ಮಾರ್ಗದರ್ಶಕರು, ಸದಸ್ಯರು ಉಪಸ್ಥಿತರಿದ್ದರು.

# ‘ಕಾಲಕಾಲಕ್ಕೆ ಕಡ್ಡಾಯವಾಗಿ ತೆರಿಗೆ ಸಂಗ್ರಹಿಸಿ’: ನಿತೀಶ್ ಕೆ. ಸೂಚನೆ

ಸಿಂಧನೂರು, ಅ.18– ‘ನಗರಸಭೆ ವ್ಯಾಪ್ತಿಯ ಆಸ್ತಿ ತೆರಿಗೆ ಹಾಗೂ ಇತರೆ ತೆರಿಗೆಗಳನ್ನು ನಿಗದಿತ ಕಾಲಕಾಲಕ್ಕೆ ಕಡ್ಡಾಯವಾಗಿ ಸಂಗ್ರಹ ಮಾಡಬೇಕು’ ಎಂದು ಜಿಲ್ಲಾಧಿಕಾರಿ ನಿತೀಶ್ ಕೆ. ಅಧಿಕಾರಿಗಳಿಗೆ ಸೂಚಿಸಿದರು.

ನಗರಸಭೆಯ ಸಭಾಂಗಣದಲ್ಲಿ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

‘ನಗರಸಭೆ ವ್ಯಾಪ್ತಿಯಲ್ಲಿ ತೆರಿಗೆ ಸಂಗ್ರಹ ಪ್ರಮಾಣ ಪ್ರಸ್ತುತ ಶೇ.73ರಷ್ಟಿದ್ದು ಮುಂದಿನ ಒಂದು ತಿಂಗಳಲ್ಲಿ ಶೇ100ರಷ್ಟು ಆಗುವಂತೆ ಕ್ರಮ ಕೈಗೊಳ್ಳಬೇಕು. ಅಲ್ಲದೆ ನೀರಿನ ತೆರಿಗೆ ಸಂಗ್ರಹ ಪ್ರಮಾಣ ಪ್ರಸ್ತುತ ಶೇ 14ರಷ್ಟಿದೆ. ಕೂಡಲೇ ಶೇ27ಕ್ಕೆ ಹೆಚ್ಚಿಸಬೇಕು. ನಗರಸಭೆ ವ್ಯಾಪ್ತಿಗೊಳಪಡುವ ಎಲ್ಲ ಅಂಗಡಿಗಳ ಲೈಸನ್ಸ್ ಕಡ್ಡಾಯಗೊಳಿಸಬೇಕು’ ಎಂದು ಹೇಳಿದರು.

15ನೇ ಹಣಕಾಸು ಆಯೋಗ ಹಾಗೂ ಎಸ್–ಎಫ್‌ಸಿ ಅಡಿಯಲ್ಲಿ ಕೈಗೊಂಡ ವಿವಿಧ ಕಾಮಗಾ–ರಿಗಳನ್ನು ನಿಗದಿತ ಸಮಯದಲ್ಲಿ ಮುಗಿಸಬೇಕು. ಒಂದುವೇಳೆ ಗುತ್ತಿಗೆ ಪಡೆದವರು ಕಾಮಗಾರಿ



ಮುಗಿಸಲು ವಿಳಂಬ ಮಾಡಿದರೆ ಪುನಃ ಟೆಂಡರ್ ಕರೆಯಬೇಕು. ಅಲ್ಲದೆ ನಗರೋತ್ಥಾನ ಹಂತ–3 ಮತ್ತು 4ರಲ್ಲಿ ಕೈಗೊಂಡ ಕಾಮಗಾರಿಗಳನ್ನು ಗುಣಮಟ್ಟ ದಲ್ಲಾಗುವಂತೆ ನಿಗವಹಿಸಬೇಕು ಎಂದು ಹೇಳಿದರು.

ಕಸ ಸಂಗ್ರಹ, ವರ್ಗೀಕರಣ ಮತ್ತು ವಿಲೇವಾರಿ ಸಮರ್ಪಕವಾಗಿ ನಡೆಯಬೇಕು. ಇದಕ್ಕೆ ಸ್ವಯಂ ಸೇವಾ ಸಂಸ್ಥೆಗಳ ಸಹಯೋಗ ಪಡೆಯಬೇಕು. ಕಸ ಸಂಗ್ರಹಣೆಯ ವೈಜ್ಞಾನಿಕ ವ್ಯವಸ್ಥೆ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಬೇಕು ಎಂದು ತಿ ಳಿಸಿದರು.

ಪೌರಾಯುಕ್ತ ಮಂಜುನಾಥ ಗುಂಡೂರು, ಕಾರ್ಯಪಾಲಕ ಎಂಜಿನಿಯರ್ ಶಾಂತಮೂರ್ತಿ ಸೇರಿದಂತೆ ವಿವಿಧ ಅಧಿಕಾರಿಗಳು ಉಪಸ್ಥಿತ–ರಿದ್ದರು.

ಇಂದಿರಾ ಕ್ಯಾಂಟೀನ್‌ಗೆ ಭೇಟಿ: ಸಭೆ ಮುಗಿದ ನಂತರ ಇಂದಿರಾ ಕ್ಯಾಂಟೀನ್‌ಗೆ ಭೇಟಿ ನೀಡಿದ ಅವರು ಸ್ವಚ್ಛತೆ, ಶುಚಿ, ರುಚಿಯ ಬಗ್ಗೆ ಪರಿಶೀಲನೆ ನಡೆಸಿದರು.

ಕ್ಯಾಂಟೀನ್‌ನಲ್ಲಿ ಸ್ವಚ್ಛತೆ ಕಾಪಾಡಲು ಮತ್ತು ಗುಣಮಟ್ಟದ ಆಹಾರ ವಿತರಣೆಗೆ ನಿಗಾವಹಿಸುವಂತೆ ತಹಶೀಲ್ದಾರ್ ಅರುಣ ದೇಸಾಯಿ ಅವರಿಗೆ ಸೂಚಿಸಿದರು.

ನೀರು ಶುದ್ಧೀಕರಣ ಘಟಕಕ್ಕೆ ಭೇಟಿ: ನಗರದ ಕುಷ್ಟಗಿ ರಸ್ತೆಯಲ್ಲಿರುವ ನೀರಿನ ಶುದ್ಧೀಕರಣ ಘಟಕಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ನೀರು ಪೂರೈಕೆ ಮಾಡುವ ಪೂರ್ವದಲ್ಲಿ ಟ್ಯಾಂಕ್‌ಗಳ ಸ್ವಚ್ಛತೆಯ ಬಗ್ಗೆ ಗಮನ ಹರಿಸಬೇಕು. ಯಾವುದೇ ಕಾರಣಕ್ಕೂ ಕಲುಷಿತ ನೀರು ಸಾರ್ವಜನಿಕರಿಗೆ ಪೂರೈಕೆಯಾಗದಂತೆ ಎಚ್ಚರವಹಿಸಬೇಕು ಎಂದು ಪೌರಾಯುಕ್ತ ಮಂಜುನಾಥ ಗುಂಡೂರು ಮತ್ತು ಸಿಬ್ಬಂದಿಗೆ ತಿಳಿಸಿದರು.

## 21ರಿಂದ ಜಾನುವಾರು ರೋಗ ನಿಯಂತ್ರಣ ಲಸಿಕಾ ಕಾರ್ಯಕ್ರಮ




ರಾಯಚೂರು, ಅ.18– ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯಿಂದ ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದಡಿ ಆರನೇ ಸುತ್ತಿನ ಕಾಲು ಬಾಯಿ ರೋಗದ ಉಚಿತ ಸಾಮೂಹಿಕ ಲಸಿಕಾ ಕಾರ್ಯಕ್ರಮವನ್ನು ಅಕ್ಟೋಬರ್ 21ರಿಂದ ನವೆಂಬರ್ 20ರವರೆಗೆ ಹಮ್ಮಿಕೊಂಡಿದ್ದು, ಎಲ್ಲರೂ ತಮ್ಮ ಜಾನುವಾರುಗಳಿಗೆ ಲಸಿಕೆ ಹಾಕಬೇಕು ಎಂದು ಜಿಲ್ಲಾಧಿಕಾರಿ ನಿತೀಶ್ ಕೆ. ತಿಳಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಪೋಸ್ಟರ್ ಬಿಡುಗಡೆ ಮಾಡಿ ಆನಂತರ ಮಾತನಾಡಿದ ಅವರು, ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯ ಸಿಬ್ಬಂದಿ ತಮ್ಮ ಹಳ್ಳಿಗೆ ಲಸಿಕೆ ಹಾಕಲು ಬಂದಾಗ ಎಲ್ಲ ರೈತರು ತಮ್ಮ ಎಲ್ಲ ದನ ಮತ್ತು ಎಮ್ಮೆ ಮತ್ತು 3 ತಿಂಗಳ ಮೇಲ್ಪಟ್ಟ ಕರುಗಳಿಗೆ ಲಸಿಕೆ ಹಾಕಿಸಿಕೊಂಡು ಈ ಸಾಂಕ್ರಾಮಿಕ ರೋಗದಿಂದಾಗುವ ಆರ್ಥಿಕ ನಷ್ಟ ತಪ್ಪಿಸಬೇಕು ಎಂದು ಹೇಳಿದರು.

ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯ ಉಪನಿರ್ದೇಶಕ ಅಶೋಕ ಕೋಲಕಾರ್ ಸೇರಿದಂತೆ ಇಲಾಖೆ ಅಧಿಕಾ–ರಿಗಳು ಉಪಸ್ಥಿತರಿದ್ದರು.


## ‘ರಾಮಕೃಷ್ಣ, ವಿವೇಕಾನಂದರ ಆದರ್ಶ ಅಳವಡಿಸಿಕೊಳ್ಳಿ’



ಮಸ್ಕಿ, ಅ.18– ‘ಪರಮಹಂಸ ರಾಮಕೃಷ್ಣ ಹಾಗೂ ಸ್ವಾಮಿ ವಿವೇಕಾನಂದರ ತತ್‌ಆದರ್ಶಗಳನ್ನು ಪ್ರತಿಯೊಬ್ಬರು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು’ ಎಂದು ಹರಿಹರದ ರಾಮಕೃಷ್ಣ ವಿವೇಕಾನಂದಾಶ್ರಮದ ಅಧ್ಯಕ್ಷ ಸ್ವಾಮಿ ಶಾರದೇಶಾನಂದಜಿ ಮಹಾರಾಜ ಹೇಳಿದರು.

ಪಟ್ಟಣದ ಭ್ರಮರಾಂಬ ದೇವಸ್ಥಾನದಲ್ಲಿ ನಡೆದ ವಿಶೇಷ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ‘ಯಾರಿಗೂ ಅನ್ಯಾಯ, ಮೋಸ ಮಾಡದೆ ಲಾಭ ಮಾಡಿಕೊಳ್ಳುವ ಮೂಲಕ ಇತರರಿಗೆ ಒಳ್ಳೆಯದು ಮಾಡಿದರೆ ಅದು ಸ್ವಾಮಿ ವಿವೇಕಾನಂದರಿಗೆ ಸಲ್ಲಿಸುವ ದೊಡ್ಡ ಗೌರವ. ಪ್ರತಿಯೊಂದು ಗ್ರಹಸ್ಥ ಕುಟುಂಬವು ಪ್ರೀತಿಯಿಂದ ಮನೆಗೆ ಬರುವವರನ್ನು’ ಕಾಣಬೇಕು ಎಂದರು. ಗಚ್ಚಿನಮಠದ ವರರುದ್ರಮುನಿ ಸ್ವಾಮೀಜಿ ಉಪಸ್ಥಿತರಿದ್ದರು.

## ಜಾಲಹಳ್ಳಿ: ಕನ್ನಡ ಜ್ಯೋತಿ ರಥಕ್ಕೆ ಸ್ವಾಗತ



**ಜಾಲಹಳ್ಳಿ, ಅ.18– ದೇವದುರ್ಗ ತಾಲ್ಲೂಕಿಗೆ ಪಟ್ಟಣ–ಕ್ಕೆ ಪ್ರವೇಶ ಮಾಡಿದ ಕನ್ನಡ ಜ್ಯೋತಿ ರಥಯಾತ್ರೆಯನ್ನು ಗ್ರಾ.ಪಂ ಕಚೇರಿಯ ಎದುರು ವಿವಿಧ ಇಲಾಖೆಯ ಅಧಿಕಾ–ರಿಗಳು ಹಾಗೂ ಸಾರ್ವಜನಿಕರು ಸ್ವಾಗತಿಸಿದರು.**

ತಹಶೀಲ್ದಾರ್ ಚನ್ನಮಲ್ಲಪ್ಪ ಘಂಟಿ ಮಾತನಾಡಿ ರಥಕ್ಕೆ ವಿಶೇಷ ಪೂಜೆ ಸಲ್ಲಿಸಿದರು.

‘ಸಮ್ಮೇಳನದ ಬಗ್ಗೆ ಜಾಗೃತಿ ಮೂಡಿಸಲು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ಕನ್ನಡ ಜ್ಯೋತಿ ರಥವು ಸಂಚರಿಸಲಿದೆ. ಸಮಸ್ತ ಕನ್ನಡಿಗರನ್ನು ಆಹ್ವಾನಿಸುವ ಉದ್ದೇಶದಿಂದ ಈ ರಥ ಸಂಚಾರಕ್ಕೆ ಚಾಲನೆ ನೀಡಲಾಗಿದೆ’ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಬಸವರಾಜ ಹಟ್ಟಿ, ಪಿಡಿಒ ನರಸಪ್ಪ ಮುದಕಪ್ಪ ಕಟ್ಟಿಮನಿ, ಶಿವರಾಜ ನಾಯಕ ಪೂಜಾರಿ, ಮುಖ್ಯ ಶಿಕ್ಷಕಿ ಗೀತಾ ಮೂಲಿಮನಿ ಸೇರಿದಂತೆ ಕನ್ನಡಪರ ಸಂಘಟನೆಯ ಮುಖಂಡರು ಉಪಸ್ಥಿತರಿದ್ದರು.

## ಜಿಲ್ಲಾ ಮಾದಿಗ ಸಮಾಜದ ಸಂಘಟನೆಗಳ ಒಕ್ಕೂಟದಿಂದ ಅರೆಬೆತ್ತಲೆ ಪ್ರತಿಭಟನಾ ರ‍್ಯಾಲಿ

**ಕಲಬುರಗಿ, ಅ.18– ತಡರಾತ್ರಿಯಿಂದ ಮಧ್ಯಾಹ್ನದವರೆಗೂ ಎಡೆಬಿಡದೆ ಸುರಿದ ಮಳೆ ನಿಂತು ಇನ್ನೇನು ತಂಪಾದ ವಾತಾವರಣ ಹಬ್ಬಿತು ಎನ್ನುವಾಗಲೇ ಮಾದಿಗ ಸಮಾಜದ ಸಂಘಟನೆಗಳ ‘ಒಳ ಮೀಸಲಾತಿ’ ಜಾರಿಯ ಹೋರಾಟದ ಕಿಚ್ಚಿನ ಕಾವು ನಗರದಾದ್ಯಂತ ವ್ಯಾಪಿಸಿತು.**



ಇಲ್ಲಿನ ಜಗತ್ ವೃತ್ತದಲ್ಲಿ ಜಿಲ್ಲಾ ಮಾದಿಗ ಸಮಾಜದ ಸಂಘಟನೆಗಳ ಒಕ್ಕೂಟದ ಮುಖಂಡರು, ಸಮುದಾಯದ ಸಾವಿರಾರು ಜನರು ಜಮಾಯಿಸಿದರು. ಪರಿಶಿಷ್ಟ ಜಾತಿಯ ಒಳ ಮೀಸಲಾತಿ ಜಾರಿಗೆ ಒತ್ತಾಯಿಸಿ ಪ್ರತಿಭಟನಾ ರ‍್ಯಾಲಿ ನಡೆಸಿದರು. ಕೆಲ ಹೊತ್ತು ಸರ್ದಾರ್ ವಲ್ಲಭಭಾಯಿ ಪಟೇಲ್ ವೃತ್ತದಲ್ಲಿ ಸಂಚಾರ ತಡೆದರು. ಆ ಬಳಿಕ ಜಿಲ್ಲಾಧಿಕಾರಿ ಕಚೇರಿ ಮುಂಭಾಗದ ರಸ್ತೆಯಲ್ಲಿ ಮೂರು ಗಂಟೆಗೂ ಹೆಚ್ಚು ಕುಳಿತು ಆಕ್ರೋಶ ವ್ಯಕ್ತಪಡಿಸಿದರು.

‘ವಂಚಕ ಕಾಂಗ್ರೆಸ್‌ನಿಂದ ಒಳ ಮೀಸಲಾತಿ ಜಾರಿ ಎಂದಿಗೂ ಸಾಧ್ಯವಿಲ್ಲ’, ‘ಮೀಸಲಾತಿ ನಮ್ಮ ಜನ್ಮಸಿದ್ಧ ಹಕ್ಕು’, ‘ಸುಪ್ರೀಂಕೋರ್ಟ್ ತೀರ್ಪಿಗೆ ಒಪ್ಪದ ಸರ್ಕಾರಕ್ಕೆ ಧಿಕ್ಕಾರ’, ‘ಎರಡನೇ ದರ್ಜೆ ಪ್ರಜೆಗಳಾಗಿರುವ ಮಾದಿಗ ಸಚಿವರೇ ರಾಜೀನಾಮೆ ಬಿಸಾಕಿ ಹೊರಬನ್ನಿ’, ‘ಮೊದಲ ಸಂಪುಟದಲ್ಲೇ ಜಾರಿಯ ಬುರುಡೆ ಬಿಟ್ಟ ಕಾಂಗ್ರೆಸ್ಸಿಗರೇ ಎಲ್ಲಿ ಅಡಗಿದ್ದೀರಿ’... ನಾಮಫಲಕಗಳನ್ನು ಹಿಡಿದು ರಾಜ್ಯ ಸರ್ಕಾರ ಹಾಗೂ ಕಾಂಗ್ರೆಸ್ ವರಿಷ್ಠರ ಮೇಲೆ ಸಿಟ್ಟು ಪ್ರದರ್ಶಿಸಿದರು.

ಮುಖಂಡ ರಮೇಶ ವಾಡೇಕರ್ ಮಾತನಾಡಿ, ‘30 ವರ್ಷಗಳಿಂದ ಹೋರಾಟ ಮಾಡುತ್ತಿದ್ದರೂ ಆಳುವವರು ಕುರುಡರಾಗಿದ್ದರೆ, ಕೇಳುವವರು ಕಿವುಡರಾಗಿದ್ದಾರೆ. ಸಿಎಂ ಸಿದ್ದರಾಮಯ್ಯ ಅವರು ಹೈಕಮಾಂಡ್‌ಗೆ ಕೇಳಿ ಈ ಬಗ್ಗೆ ತೀರ್ಮಾನಿಸುವುದಾಗಿ ಕುಂಟು ನೆಪ ಹೇಳುತ್ತಿದ್ದಾರೆ. ಒಳ ಮೀಸಲಾತಿ ಜಾ–ರಿಗೆ ಕೆಲವರು ಷಡ್ಯಂತ್ರ ನಡೆಸಿ, ಅದಕ್ಕೆ ತಡೆಯೊಡ್ಡುತ್ತಿದ್ದಾರೆ. ಮುಂದಿನ ದಿನಗಳಲ್ಲಿ ಅವರನ್ನು ಮಣಿಸುತ್ತೇವೆ’ ಎಂದರು.

ಮುಖಂಡ ಗೋಪಾಲ ಕಟ್ಟಿಮನಿ ಮಾತನಾಡಿ, ‘ನಾವು ರಾಜ್ಯ ಸರ್ಕಾರಕ್ಕೆ ಭಿಕ್ಷೆ ಕೇಳುತ್ತಿಲ್ಲ, ನಮ್ಮ ಪಾಲಿನ ಹಕ್ಕು ಕೇಳುತ್ತಿದ್ದೇವೆ. ಸ್ವಾತಂತ್ರ್ಯ ಬಂದು ಏಳೂವರೆ ದಶಕಗಳು ಕಳೆದರೂ ಹೋರಾಡುವ ಸ್ಥಿತಿ ಬಂದಿದೆ. ನಮ್ಮವರು ಎಂದು ಹೇಳಿಕೊಳ್ಳುವ ದಲಿತ ಸಚಿವರು ಹಾಗೂ ಶಾಸಕರು ಈ ಬಗ್ಗೆ ಧ್ವನಿ ಎತ್ತಬೇಕಿದೆ’ ಎಂದು ಆಗ್ರಹಿಸಿದರು. ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರಿಗೆ ಮನವಿ ಪತ್ರ ಸಲ್ಲಿಸಲಾಯಿತು. ಬಿಗಿ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿತ್ತು.

ಡಾ.ಬಾಬು ಜಗಜೀವರಾಂ ಹೋರಾಟ ಸಮಿತಿ, ದಲಿತ ಸಂಘರ್ಷ ಸಮಿತಿ, ಮಾದಿಗ ದಂಡೋರ, ಕರ್ನಾಟಕ ಮಾದಿಗ ಸಂಘಟನೆ, ಅಂಬೇಡ್ಕರ್ ಯುವ ಸೇನೆ, ಜಾಂಬವ ಯುವ ಸೇನೆ, ಮಾದಿಗರ ಯುವ ಸೇನೆ, ಮಾದಿಗ ಸಂಘರ್ಷ ಸಮಿತಿ ಸೇರಿ ಇತರೆ ಸಂಘಟನೆಗಳು ಪಾಲ್ಗೊಂಡಿದ್ದವು.

## ‘ಮೊಬೈಲ್, ಜಾಲತಾಣದಿಂದ ರಂಗಭೂಮಿ ನಾಶ’

ರಾಯಚೂರು, ಅ.18– ‘ಮೊಬೈಲ್ ಹಾಗೂ ಆಧುನಿಕ ಸಮೂಹ ಮಾಧ್ಯಮಗಳ ಭರಾಟೆಯಲ್ಲಿ ರಂಗಭೂಮಿ ನಶಿಸುತ್ತಿದೆ’ ಎಂದು ಏಮ್ಸ್ ಹೋರಾಟ ಸಮಿತಿ ಪ್ರಧಾನ ಸಂಚಾಲಕ ಬಸವರಾಜ ಕಳಸ ವಿಷಾದ ವ್ಯಕ್ತಪಡಿಸಿದರು.

ನಗರದ ಕನ್ನಡ ಭವನದಲ್ಲಿ ಭಗತ್ ಸಾಂಸ್ಕೃತಿಕ ಸೇವಾ ಸಂಘದ ವತಿಯಿಂದ ಮೂರು ದಿನಗಳ ರಂಗೋತ್ಸವ ರಂಗರಥ ಉದ್ಘಾಟಿಸಿ ಅವರು ಮಾತನಾಡಿದರು.

‘ಕಲಾವಿದರಿಗೆ, ಸಾಂಸ್ಕೃತಿಕ ಚಟುವಟಿಕೆಗಳಿಗೆ ಅನುಕೂಲವಾದ ಜಿಲ್ಲಾ ರಂಗಮಂದಿರಕ್ಕೆ ದುಬಾರಿ ಶುಲ್ಕ ವಿಧಿಸಿದ್ದರಿಂದ ಆರ್ಥಿಕವಾಗಿ ಅಶಕ್ತವಾದ ಸಂಘ ಸಂಸ್ಥೆಗಳಿಗೆ ಕಾರ್ಯಕ್ರಮ ಮಾಡಲು ಆಗುತ್ತಿಲ್ಲ. ತ್ವರಿತವಾಗಿ ರಂಗಮಂದಿರ ಬಾಡಿಗೆ ದರ ರಿಯಾಯಿತಿ ದರದಲ್ಲಿ ನೀಡಬೇಕು ಹಾಗೂ ಕಲೆ, ಸಂಸ್ಕೃತಿಗೆ ಪ್ರೋತ್ಸಾಹ ನೀಡಬೇಕು’ ಎಂದರು.

ಕಲಾವಿದ ವಿ.ಎನ್.ಅಕ್ಕಿ ಮಾತನಾಡಿ, ‘ರಂಗಮಂದಿರದ ದುಬಾರಿ ಶುಲ್ಕಕ್ಕೆ ನಲುಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಧೋರಣೆ ವಿರುದ್ಧ ಸಾತ್ವಿಕ ಪ್ರತಿಭಟನೆ ರೂಪವಾಗಿ ಕನ್ನಡ ಭವನದ ಸೀಮಿತ ಸ್ಥಳದಲ್ಲೇ ಅಗಾಧವಾದ ರಂಗಸಜ್ಜಿಕೆ ರೂಪಿಸಿ ನಾಟಕೋತ್ಸವ ಮಾಡುತ್ತಿರುವುದು ಶ್ಲಾಘನೀಯ. ರಂಗಭೂಮಿಗೆ ಸಾವಿಲ್ಲ. ಎಷ್ಟೇ ಅಡ್ಡಿ ಆತಂಕ ಎದುರಾದರು ಕಾಲಮಾನಕ್ಕೆ ತಕ್ಕಂತೆ ನಾವಿನ್ಯತೆ ರೂಢಿಸಿಕೊಂಡು ಮತ್ತೆ ಪುಟಿದೇಳುತ್ತದೆ’ ಎಂದರು.

ಮುಖ್ಯ ಅತಿಥಿ ರುದ್ರಪ್ಪ ಪಗಡದಿನ್ನಿ ಮಾತನಾಡಿ, ‘ಜಿಲ್ಲೆಯಲ್ಲಿ ನಾಟಕಗಳ ಬೆಳವಣಿಗೆಗೆ ವಿ.ಎನ್.ಅಕ್ಕಿ ಪಾತ್ರ ಹಿರಿದಾಗಿದೆ. ರಂಗಭೂಮಿಗೆ ಅವರು ನೀಡುತ್ತಿರುವ ಪ್ರಾಧಾನ್ಯತೆ ಮಾದರಿ’ ಎಂದರು. ಭಗತ್ ಸಾಂಸ್ಕೃತಿಕ ಸೇವಾ ಸಂಘದ ಅಧ್ಯಕ್ಷ ವಿ.ಎನ್ .ಅಕ್ಕಿ ಅಧ್ಯಕ್ಷತೆ ವಹಿಸಿದ್ದರು.

ಸಿರಗುಪ್ಪ ತಾಲ್ಲೂಕಿನ ಧಾತ್ರಿ ರಂಗಸಂಸ್ಥೆ ಸಿರಿಗೇರಿ ತಂಡದವ–ರಿಂದ ಶ್ರೀ ಕೃಷ್ಣ ಸಂಧಾನ ನಾಟಕ ಪ್ರದರ್ಶನ ಮಾಡಲಾಯಿತು.

## ಗ್ರಾಮೀಣ ಕೃಷಿ ಕಾರ್ಯಾನುಭವ ಶಿಬಿರ




ರಾಯಚೂರು, ಅ.18– ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಕೃಷಿ ಮಹಾವಿದ್ಯಾಲಯದ ಅಂತಿಮ ವರ್ಷದ ವಿದ್ಯಾರ್ಥಿಗಳ ಅಧ್ಯಯನದ ಭಾಗವಾಗಿ ಗ್ರಾಮೀಣ ಕೃಷಿ ಕಾರ್ಯನುಭವ ಶಿಬಿರ ತಾಲ್ಲೂಕಿನ ಮೂರು ಗ್ರಾಮಗಳಲ್ಲಿ ಆರಂಭವಾಯಿತು.

ಕೃಷಿ ಅರ್ಥಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಸತಿಶಕುಮಾರ, ವಿಶ್ವನಾಥ ಹಾಗೂ ಮನೋಜಕುಮಾರ ನೇತೃತ್ವದಲ್ಲಿ ರಾಯಚೂರು ತಾಲ್ಲೂಕಿನ ಮಟಮಾರಿ, ಮರ್ಚಟಹಾಳ ಮತ್ತು ಪೂರ್ತಿಪ್ಲಿ ಗ್ರಾಮಗಳಲ್ಲಿ ವಿದ್ಯಾರ್ಥಿಗಳು ಜಾಗೃತಿ ಜಾಥಾ ನಡೆಸಿದರು.

ಮೂರೂ ಗ್ರಾಮಗಳಲ್ಲಿ ಒಟ್ಟು 125 ವಿದ್ಯಾರ್ಥಿಗಳು ಕೃಷಿ ಶಿಕ್ಷಣದ ಭಾಗವಾಗಿ 70 ದಿನಗಳ ವರೆಗೆ ವಿದ್ಯಾರ್ಥಿಗಳು ಗ್ರಾಮದಲ್ಲಿ ವಾಸವಿದ್ದು ಗ್ರಾಮೀಣ ಕೃಷಿ ಮತ್ತು ಕೃಷಿ ಸಂಬಂಧಿತ ಚಟುವಟಿಕೆಗಳ ಅರ್ಥ ಮಾಡಿಕೊಳ್ಳಲಿದ್ದಾರೆ.

## ರೈತರ ಹಿತಾಸಕ್ತಿಗೆ ಪೂರಕವಾದ ವರದಿ: ಸಭೆಯಲ್ಲಿ ಡಿಸಿ ಭರವಸೆ




**ಚಿತ್ತಾಪುರ, ಅ.18– ‘ಅಲ್ಟ್ರಾಟೆಕ್ ಸಿಮೆಂಟ್ ಕಂಪನಿ ವಿವಿಧ ಗ್ರಾಮಗಳಲ್ಲಿ ರೈತರ ಜಮೀನು ಖರೀದಿಸಿ ಕಲ್ಲು ಗಣಿಗಾರಿಕೆ, ಸಿಮೆಂಟ್ ಉತ್ಪಾದನಾ ಘಟಕ ಸ್ಥಾಪಿಸುವ ಕುರಿತು ಸಭೆಯಲ್ಲಿ ವ್ಯಕ್ತವಾದ ಅಭಿಪ್ರಾಯ, ಬೇಡಿಕೆಗಳನ್ನು ಕ್ರೋಢೀಕರಿಸಿ ಪರಿಸರ, ರೈತರು, ಸಾರ್ವಜನಿಕರ ಹಿತಾಸಕ್ತಿಗೆ ಪೂರಕವಾಗಿ ಸರ್ಕಾರಕ್ಕೆ ವರದಿ ಸಲ್ಲಿಸಲಾಗುವುದು’ ಎಂದು ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ತಿಳಿಸಿದರು.**

ತಾಲ್ಲೂಕಿನ ರಾವೂರು ಗ್ರಾಮದ ಡಿವೈನ್ ಭರಹುತ್ ಫಂಕ್ಷನ್ ಹಾಲ್‌ನಲ್ಲಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪ್ರಾದೇಶಿಕ ಕಚೇರಿಯಿಂದ ನಡೆದ ಅಲ್ಟ್ರಾಟೆಕ್ ಸಿಮೆಂಟ್ ಕಂಪನಿಯು ಕೆ.ಚಿತ್ತಾಪುರ, ಕೆ.ನಾಗಾಂವ, ಯರಗಲ್, ರಾವೂರು ಗ್ರಾಮದ 713 ಹೆಕ್ಟೇರ್ ಪ್ರದೇಶದಲ್ಲಿ 5.10 ಎಂ.ಟಿ.ಪಿ.ಎ ಸಾಮರ್ಥ್ಯದ ಸುಣ್ಣದ ಕಲ್ಲು ಗಣಿಗಾರಿಕೆ ಆರಂಭಿಸುವ ಪ್ರಸ್ತಾವಕ್ಕೆ ಪರಿಸರ ಕುರಿತ ಸಾರ್ವಜನಿಕ ಅಭಿಪ್ರಾಯ ಸಂಗ್ರಹ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

‘ಜಮೀನಿಗೆ ಬೆಲೆಯ ಬೇಡಿಕೆ, ಭೂ ಸಂತ್ರಸ್ತರ ಕುಟುಂಬಕ್ಕೆ ನೌಕರಿ ನೀಡುವ ಸಂಬಂಧ ಕಂಪನಿ ಆಡಳಿತ ಮಂಡಳಿಯು ಅಧಿಕೃತ ಪತ್ರ ನೀಡಬೇಕು ಎನ್ನುವುದು ರೈತರ ಬೇಡಿಕೆಯಾಗಿದೆ. ಪತ್ರ ನೀಡಲು ಜಿಲ್ಲಾಡಳಿತ ಕಂಪನಿಗೆ ಒಂದು ವಾರ ಕಾಲಾವಕಾಶ ನೀಡುತ್ತದೆ. ಲಿಖಿತವಾಗಿ ನೀಡಿದರೆ ಅದನ್ನೂ ವರದಿಗೆ ಅಳವಡಿಸುತ್ತೇವೆ. ಒಂದು ವೇಳೆ ಹಾಗೆ ಮಾಡದಿದ್ದರೆ ರೈತರ ಬೇಡಿಕೆ ಮತ್ತು ಸಭೆಯ ಅಭಿಪ್ರಾಯ ಯಥಾವತ್ತಾಗಿ ವರದಿಯಲ್ಲಿ ನಮೂದಿಸಿ ಸರ್ಕಾರಕ್ಕೆ ಸಲ್ಲಿಸುತ್ತೇವೆ’ ಎಂದರು.

‘ಕಂಪನಿ ರೈತರ ಪರವಾಗಿದ್ದರೆ ರೈತರು ಕಂಪನಿ ಪರವಾಗಿರುತ್ತಾರೆ. ಜನರ ಆರೋಗ್ಯ ಸಂರಕ್ಷಣೆಗೆ ಆದ್ಯತೆ ನೀಡಬೇಕು. ಶಿಕ್ಷಣ, ರಸ್ತೆ, ಶುದ್ಧ ನೀರು, ಶೌಚಾಲಯ ಸೇರಿ ಮೂಲ ಸೌಕರ್ಯ ಒದಗಿಸಬೇಕು. ವೃತ್ತಿ ಕೌಶಲಾಧಾರಿತ ಶಿಕ್ಷಣ, ಅರ್ಹತೆಗೆ ಅನುಸಾರ ಸ್ಥಳೀಯರಿಗೆ ನೌಕರಿ ನೀಡಬೇಕು. ಈಗ ನೀಡುತ್ತಿರುವ ಪ್ರತಿ ಎಕರೆಗೆ 21 ಲಕ್ಷ ಬೆಲೆಯನ್ನು 35 ಲಕ್ಷಕ್ಕೆ ಹೆಚ್ಚಿಸಬೇಕು’ ಎಂದು ಸಭೆಯಲ್ಲಿ ರೈತರು ಒಕ್ಕೂರಲಿನಿಂದ ಆಗ್ರಹಿಸಿದರು.

ಸಭೆಯಲ್ಲಿ ಶಿವಲಿಂಗಪ್ಪ ವಾಡೇದ್, ಶ್ರೀನಿವಾಸ ಸಗರ, ಸಿದ್ದಣ್ಣಾ ರಾವೂರು, ಭೀಮಾಶಂಕರ, ಮಹೇಶ ಬಾಳಿ, ತಿಪ್ಪಣ್ಣ ವಗ್ಗರ್, ಫೇರೋಜ್, ಚಂದ್ರಕಾಂತ ರಾವೂರು, ಗೋವಿಂದ ಸಗರ, ಮಲ್ಲಿಕಾರ್ಜುನ ಹೊನಗುಂಟಿ, ಮಹೆಬೂಬ ಖಾನ್, ಅಶೋಕ ಸಗರ, ಜಗದೀಶ ಚವಾಣ್, ಶಶಿಕುಮಾರ, ರಾಮಚಂದ್ರ ರಾಠೋಡ, ಶರಣು ಜ್ಯೋತಿ, ಶಿವರುದ್ರ ಭೀಣಿ, ಆನಂದ ಯರಗಲ್, ಉಮೇಶ ಚವಾಣ್, ಸೂರ್ಯಕಾಂತ ಕಟ್ಟಿಮನಿ ಹಾಗೂ ಶಿವರಾಜ ಮಾತನಾಡಿದರು.

ಹಿರಿಯ ಪರಿಸರ ಅಧಿಕಾರಿ ಆರ್.ರೇಖಾ, ಪರಿಸರ ಅಧಿಕಾರಿ ಕೆ.ಎಂ.ಸೋಮಶೇಖರ, ಸೇಡಂ ಉಪ ವಿಭಾಗಾಧಿಕಾರಿ ಪ್ರಭುರೆಡ್ಡಿ, ಶಹಾಬಾದ್ ತಹಶೀಲ್ದಾರ್ ಜಗದೀಶ ಚೌರ್, ಅಲ್ಟ್ರಾಟೆಕ್ ಸಿಮೆಂಟ್ ಅಧಿಕಾರಿ ಉದಯ ಪವಾರ್, ಉಪಾಧ್ಯಕ್ಷ ಕೆ.ವಿ.ವಿ.ವೈ.ಎಸ್ ನಾರಾಯಣ ಹಾಜ–ರಿದ್ದರು.

## ‘ಪತ್ರಿಕೆಗಳು ಸತ್ಯಕ್ಕೆ ಆದ್ಯತೆ ನೀಡಬೇಕು’: ಶಾಂತ ಭೀಷ್ಮ ಚೌಡಯ್ಯ ಸ್ವಾಮೀಜಿ



ಲಿಂಗಸುಗೂರು, ಅ.18– ‘ಪತ್ರಿಕೆ ಸಮಾಜ ಮತ್ತು ಸರ್ಕಾರದ ಮಧ್ಯೆ ಸಂಪರ್ಕ ಸೇತುವೆಯಾಗಿ ಕೆಲಸ ಮಾಡಬೇಕು. ಸುದ್ದಿ ನೀಡುವ ಆತುರದ ನಿರ್ಧಾರದಲ್ಲಿ ಸಂಶೋಧನಾತ್ಮಕ ರೀತಿಯಲ್ಲಿ ಸತ್ಯ ಸಂಗತಿಗಳಿಗೆ ಮೊದಲ ಆದ್ಯತೆ ನೀಡಬೇಕು’ ಎಂದು ಅಂಬಿಗರ ಚೌಡಯ್ಯ ಗುರು ಪೀಠದ ಶಾಂತ ಭೀಷ್ಮ ಚೌಡಯ್ಯ ಸ್ವಾಮೀಜಿ ಸಲಹೆ ನೀಡಿದರು. ಪಾಕ್ಷಿಕ ಪತ್ರಿಕೆಯೊಂದರ ಬಿಡುಗಡೆ ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ವಿಧಾನ ಪರಿಷತ್ ಸದಸ್ಯ ಶರಣಗೌಡ ಪಾಟೀಲ ಬಯ್ಯಾಪುರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ‘ಪ್ರಸಕ್ತ ದಿನ ಮಾನಗಳಲ್ಲಿ ಪತ್ರಿಕೆಗಳನ್ನು ಮುನ್ನಡೆಸಿಕೊಂಡು ಹೋಗುವುದು ಕಷ್ಟದ ಕೆಲಸ. ದೃಶ್ಯ ಮಧ್ಯಮಗಳ ಪೈಪೋಟಿ ಮಧ್ಯೆ ಮುದ್ರಣ ಮಾಧ್ಯಮ ಇನ್ನೂ ಅಸ್ತಿತ್ವ ಉಳಿಸಿಕೊಂಡಿದೆ. ವೈಭವೀಕರಣದ ಬದುಕಿನತ್ತ ವಾಲಿದ ಯುವ ಸಮೂಹ ಜಾಗೃತಗೊಳಿಸುವ ನಿಟ್ಟಿನಲ್ಲಿ ಪತ್ರಿಕೆಗಳು ಕೆಲಸ ಮಾಡಬೇಕು’ ಎಂದು ಶುಭ ಹಾರೈಸಿದರು. ಶಾಸಕ ಬಸವನಗೌಡ ತುರುವಿಹಾಳ ಮಾತನಾಡಿದರು.

ಸಾಧಕರಿಗೆ ಸನ್ಮಾನ: ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮೆರೆದು ಹಾಗೂ ಸಮಾಜ ಮುಖಿ ಕೆಲಸ ಕಾರ್ಯಗಳಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡ ಮತ್ತು ಜಿಲ್ಲೆ ಮತ್ತು ರಾಜ್ಯ ಮಟ್ಟದ ಪ್ರಶಸ್ತಿಗಳನ್ನು ಪಡೆದುಕೊಂಡ ಹಲವರನ್ನು ಇದೇ ಸಂದರ್ಭದಲ್ಲಿ ಗುರುತಿಸಿ ಸನ್ಮಾನಿಸಲಾಯಿತು.

ಮಹಾದೇವಯ್ಯ ಸ್ವಾಮಿ ನೇತೃತ್ವ ವಹಿಸಿದ್ದರು. ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಸಮಿತಿ ಸದಸ್ಯ ಶಿವಮೂರ್ತಿ ಹಿರೇಮಠ. ತಾಲ್ಲೂಕು ಘಟಕದ ಅಧ್ಯಕ್ಷ ಗುರುರಾಜ ನಾಯಕ. ಜಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಂತೋಷ ರಾಜಗುರು, ಬಿಜೆಪಿ ತಾಲ್ಲೂಕು ಘಟಕ ಅಧ್ಯಕ್ಷ ಅಯ್ಯಣ್ಣ ಮಾಳೂರು, ಹಿರಿಯ ಮುಖಂಡರಾದ ಎಚ್.ಬಿ ಮುರಾರಿ, ವೆಂಕಟೇಶ ಗುತ್ತೆದಾರ, ಕೆ. ಕರಿಯಪ್ಪ, ಪತ್ರಿಕೆ ಸಂಪದಾಕ ಅಮರೇಶ ಕಲ್ಲೂರು ಪಾಲ್ಗೊಂಡಿದ್ದರು.

## ಟಿಬಿ ಡ್ಯಾಂನಲ್ಲಿ 105 ಟಿಎಂಸಿ ನೀರು ಭರ್ತಿಗೆ ಒತ್ತಾಯ

ಸಿಂಧನೂರು, ಅ.18– ‘ತುಂಗಭದ್ರಾ ಜಲಾಶಯದ ಮೇಲ್ಭಾಗದಲ್ಲಿ ಉತ್ತಮ ರೀತಿಯ ಮಳೆಯಾಗಿದ್ದು ಒಳ ಹರಿವು ಹೆಚ್ಚಿದೆ. ತುಂಗಭದ್ರಾ ಬೋರ್ಡ್ ಅಧಿಕಾರಿಗಳು ಜಲಾಶಯದಲ್ಲಿ ಸಂಪೂರ್ಣ 105 ಟಿಎಂಸಿ ಅಡಿ ನೀರು ಭರ್ತಿ ಮಾಡಿಕೊಳ್ಳಬೇಕು’ ಎಂದು ಶಾಸಕ ಹಂಪನಗೌಡ ಬಾದರ್ಲಿ ಒತ್ತಾಯಿಸಿದರು.

ತಮ್ಮ ನಿವಾಸದಲ್ಲಿ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ‘ತುಂಗಭದ್ರಾ ಎಡದಂಡೆ ವ್ಯಾಪ್ತಿಯಲ್ಲಿ ಬೇಸಿಗೆ ಬೆಳೆಗೆ 34 ಟಿಎಂಸಿ ನೀರು ಕೊರತೆಯಾಗಲಿದ್ದು ಅಧಿಕಾ–ರಿಗಳು ಎಚ್ಚೆತ್ತುಕೊಂಡು ಈಗಿರುವ ನೀರನ್ನು ಸಮರ್ಪಕವಾಗಿ ಸಂಗ್ರಹಣೆ ಮಾಡಿಕೊಳ್ಳಬೇಕು. ಇದೀಗ ಜಲಾಶಯದಲ್ಲಿ 101 ಟಿಎಂಸಿ ನೀರು ಭರ್ತಿಯಾಗಿದೆ ಎಂಬ ಮಾಹಿತಿ ಇದೆ. ಇನ್ನು 4 ಟಿಎಂಸಿ ನೀರು ಪೋಲು ಮಾಡದೆ ಮುಂದಿನ 15 ದಿನಗಳವರೆಗೆ ಒಳಹರಿವು ಬರುವ ನಿರೀಕ್ಷೆ ಇರುವುದರಿಂದ ಜಲಾಶಯದಲ್ಲಿ ಸಂಪೂರ್ಣ 105 ಟಿಎಂಸಿ ನೀರನ್ನು ಅಧಿಕಾರಿಗಳು ಭರ್ತಿ ಮಾಡಬೇಕು. ಈಗಾಗಲೇ ನೀರಾವರಿ ನಿಗಮದ ಅಧಿಕಾರಿಗಳಿಗೆ ಈ ಕುರಿತು ಒತ್ತಾಯಿಸಲಾಗಿದೆ’ ಎಂದು ಅವರು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಕಾಂಗ್ರೆಸ್ ನಗರ ಘಟಕದ ಅಧ್ಯಕ್ಷ ಖಾಜಿಮಲ್ಲಿಕ್, ತಾಲ್ಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಬಿ.ಎಚ್.ನಾಯಕ ಉಪಸ್ಥಿತರಿದ್ದರು.

# ಕರ್ನಾಟಕ ವ್ಯವಸಾಯ ವೃತ್ತಿಪರ ಯೂನಿಯನ್ ಸಂಘಟನೆಯಿಂದ ಪ್ರತಿಭಟನೆ



ಯಲಬುರ್ಗಾ, ಅ.18– ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಕರ್ನಾಟಕ ವ್ಯವಸಾಯ ವೃತ್ತಿಪರ ಯೂನಿಯನ್ ಸಂಘಟನೆಯ ಪದಾಧಿಕಾರಿಗಳು ಪ್ರತಿಭಟನೆ ನಡೆಸಿ ತಹಶೀಲ್ದಾರ್‌ಗೆ ಮನವಿ ಸಲ್ಲಿಸಿದರು.

ಬಡತನದಿಂದ ಬಳಲುತ್ತಿರುವ ಅನೇಕ ದೇಶಗಳಲ್ಲಿ ಆಹಾರ ಕೊರತೆಯಾಗದಂತೆ ನೋಡಿಕೊಳ್ಳುವ ಉದ್ದೇಶದಿಂದ ವಿಶ್ವಸಂಸ್ಥೆಯು ವಿಶ್ವ ಹಸಿವಿನ ದಿನ ಎಂದು ಘೋಷಿಸಿದ್ದು, ಆಹಾರ ಭದ್ರತೆಗೆ ಕ್ರಮಕೈಗೊಳ್ಳಲಾಗುತ್ತಿದೆ. ಸುಸ್ಥಿರ ಕೃಷಿಗಾಗಿ ವಿವಿಧ ಘೋಷಣೆಗಳ ಅಡಿಯಲ್ಲಿ ಕಾರ್ಯ ನಿರ್ವಹಿಸಬೇಕಾದ ಸರ್ಕಾರಗಳು ಕೃಷಿಯೇತರ ಚಟುವಟಿಕೆಗಳಿಗೆ ಭೂಮಿ ಹಂಚಿಕೆ ಮಾಡುತ್ತಿರುವುದು, ಮಾರಾಟ ಮಾಡುತ್ತಿರುವುದು, ಕೃಷಿಕ ಹಾಗೂ ರೈತರಿಂದ ಭೂಮಿಯನ್ನು ಕಿತ್ತುಕೊಳ್ಳುವುದು ಹೀಗೆ ಆಹಾರ ಪದಾರ್ಥಗಳ ಉತ್ಪಾದನೆಗೆ ಅವಕಾಶವೇ ಇಲ್ಲದ ಸನ್ನಿವೇಶಗಳನ್ನು ನಿರ್ಮಾಣ ಮಾಡುತ್ತಿರುವುದನ್ನು ನಿಲ್ಲಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಿದ್ದಾರೆ.

ಕೃಷಿ ಕಾರ್ಮಿಕರಿಗೆ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಸಮರ್ಪಕವಾಗಿ ಉದ್ಯೋಗದ ದಿನಗಳನ್ನು ಹೆಚ್ಚಿಸುವುದರ ಜೊತೆಗೆ 7ನೇ ವೇತನ ಆಧಾರದ ಮೇಲೆ ಕೂಲಿ ದರವನ್ನು ಹೆಚ್ಚಿಸಬೇಕು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಕುಟುಂಬಕ್ಕೆ 5 ಎಕರೆ ಭೂಮಿ ಹಾಗೂ ನೀರಾವರಿ ಸೌಲಭ್ಯ ಕಲ್ಪಿಸಿಕೊಡಬೇಕು. 60 ವರ್ಷ ಪೂರೈಸಿದ ಪ್ರತಿ ನಾಗರಿಕರಿಗೆ ಕನಿಷ್ಠ 5 ಸಾವಿರ ವೃದ್ಧಾಪ್ಯ ವೇತನ ನೀಡಬೇಕು. ಕಾರ್ಮಿಕರಿಗೆ ಉಚಿತ ಮನೆ ನಿರ್ಮಿಸಿಕೊಡುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವ ಮೂಲಕ ಶೋಷಿತ ರೈತರು, ಕೃಷಿ ಕಾರ್ಮಿಕರಿಗೆ ನೆಮ್ಮದಿಯ ಬದುಕು ಕಟ್ಟಿಕೊಳ್ಳುವಂತೆ ಮಾಡಬೇಕು ಎಂದು ಕೋರಿದ್ದಾರೆ.

ಸಂಘಟನೆಯ ಜಿಲ್ಲಾ ಘಟಕದ ಅಧ್ಯಕ್ಷ ಯಲ್ಲಪ್ಪ ಮ್ಯಾಗಳಕೇರಿ, ತಾಲ್ಲೂಕು ಸಂಯೋಜಕ ಶಿವಶಂಕರ ಲಗಳೂರ, ಮಾರುತಿ ದೊಡ್ಡಮನಿ, ಮಲ್ಲಿಕಾರ್ಜುನ ಕನಕಗಿರಿ, ಹನುಮಂತಿ ತಿಪ್ಪನಾಳ, ಶಾಂತವ್ವ ಬಂಡಿಹಾಳ, ಮಾಳವ್ವ ಗದ್ದಿ, ದುರ್ಗವ್ವ, ಬಸಮ್ಮ ಇದ್ದರು.

# ಮೈಬೂಬ ಸುಭಾನಿ ಗ್ಯಾರವಿ: ಅನ್ನ ಸಂತರ್ಪಣೆ



ಕನಕಗಿರಿ, ಅ.18– ಪಟ್ಟಣದ ಇಂದಿರಾನಗರ ಹಾಗೂ ಮೆಹಬೂಬ ನಗರದಲ್ಲಿ ಹಜರತ್ ಮೈಬೂಬ ಸುಭಾನಿ ಗ್ಯಾರವಿ ಕಾರ್ಯಕ್ರಮ ವಿಜೃಂಭಣೆಯಿಂದ ನಡೆಯಿತು.

ಜಯಂತಿ ನಿಮಿತ್ತ ಝುಂಡಾ ಕಟ್ಟೆಯನ್ನು ಸುಣ್ಣ ಬಣ್ಣ ಹಚ್ಚಿ, ತಳಿರು, ತೋರಣ, ಬಾಳೆ ದಿಂಡು, ತೆಂಗಿನ ಗರಿ, ಹೂವುಗಳಿಂದ ಶೃಂಗರಿಸಲಾಗಿತ್ತು. ಜಾತಿ, ಧರ್ಮವಿಲ್ಲದೆ ಸ್ಥಳೀಯರು ಭಾಗವಹಿಸಿದ್ದರು.

ಮೈಬೂಬ ನಗರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಹುಸೇನಪೀರ ಅಗರಬತ್ತಿ, ಕಲಂದರ ಎಲಿಗಾರ ಅವರು ಕುರಾನ್ ಪಠಣ ಮಾಡಿದ ನಂತರ ಅನ್ನ ಸಂತರ್ಪಣೆಕ್ಕೆ ಚಾಲನೆ ನೀಡಲಾಯಿತು.

ಪಟ್ಟಣ ಪಂಚಾಯಿತಿ ಉಪಾಧ್ಯಕ್ಷ ಕಂಠಿರಂಗ ನಾಯಕ, ಗ್ರಾಮ ಪಂಚಾ ಯಿತಿ ಮಾಜಿ ಸದಸ್ಯರಾದ ವೆಂಕಟೇಶ ಬೋವಿ, ನಾಗರಾಜ ಬೋಂದಾಡೆ, ಪ್ರಮುಖರಾದ ಅಮರೇಶ ಭಾವಿಕಟ್ಟಿ, ಖಾಜಸಾಬ ಬಿಳಿಕುದುರಿ, ಭಾಷ ಅಗರಬತ್ತಿ, ಅಜೀಜಸಾಬ ಕಾತರಕಿ, ಮೈಬೂಬಪಾಷ ಮುಲ್ಲಾರ, ರಫಿ ಬಿಳಿಕುದುರಿ, ಮೈಬೂಬಸಾಬ ಮುಲ್ಲಾರ, ಶಕ್ಷಾವಲಿ, ಹೊನ್ನುರುಸಾಬ ರಣಧೀರ, ಪಟ್ಟಣ ಪಂಚಾಯಿತಿ ಸದಸ್ಯರು, ಮುಖಂಡರು ಪಾಲ್ಗೊಂಡಿದ್ದರು.

# ಸ್ತನ ಕ್ಯಾನ್ಸರ್ ಅರಿವು ಕಾರ್ಯಕ್ರಮ




ಭಟ್ಕಳ, ಅ.18– ಕ್ಯಾನ್ಸರ್ ಹಲವು ಸಂದರ್ಭಗಳಲ್ಲಿ ಅದರ ಲಕ್ಷಣಗಳು ಗೊತ್ತಾಗುವುದಿಲ್ಲ. ಹೀಗಾಗಿ ಇದನ್ನು ಪ್ರಥಮ ಹಂತದಲ್ಲಿ ಗುರುತಿಸುವುದು ಮುಖ್ಯವಾಗಿರುತ್ತದೆ ಎಂದು ಸರ್ಕಾರಿ ಆಸ್ಪತ್ರೆಯ ವೈದ್ಯೆ ಸ್ತ್ರೀ ರೋಗ ತಜ್ಞೆ ಶಮ್ಸನೂರ್ ಹೇಳಿದರು.

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಇತ್ತೀಚಿಗೆ ನಡೆದ ಸ್ತನ ಕ್ಯಾನ್ಸರ್ ಅರಿವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಕಾಲೇಜಿನ ಪ್ರಾಂಶುಪಾಲ ನಾಗೇಶ ಶೆಟ್ಟಿ ಮಾತನಾಡಿದರು.

ಕಾಲೇಜಿನ ಐಕ್ಯೂಎಸಿ ಸಂಚಾಲಕ ಸುರೇಶ ಮೆಟಗಾರ, ರೆಡ್ ಕ್ರಾಸ್ ಘಟಕದ ಸಂಯೋಜಕ ವೈಶಾಲಿ ಜಿ.ಆರ್ ಹಾಗೂ ಉಪನ್ಯಾಸಕರಾದ ಚಂದ್ರಾವತಿ ಮೊಗೇರ, ಶಿಲ್ಪಾ ನಾಯ್ಕ, ಜ್ಯೋತಿ ಗೌಡ ಹಾಗೂ ನೇತ್ರಾವತಿ ನಾಯ್ಕ ಇದ್ದರು. ವಿದ್ಯಾರ್ಥಿನಿ ವೀಣಾ ಸ್ವಾಗತಿಸಿದರು. ಕಮಲಾಕ್ಷಿ ವಂದಿಸಿದರು. ವಿಜೇತಾ ನಿರೂಪಿಸಿದರು.

# ಮಳೆಗೆ ಕೊಳೆತ ಈರುಳ್ಳಿ ಬೆಳೆ



ಅಳವಂಡಿ, ಅ.18– ಕಳೆದ ಮೂರ್ನಾಲ್ಕು ದಿನಗಳಿಂದ ಸುರಿಯುತ್ತಿರುವ ಜಿಟಿಜಿಟಿ ಮಳೆಗೆ ಸಮೀಪದ ಹನಕುಂಟಿ ಗ್ರಾಮದ ರೈತರ ಜಮೀನಿಗಳಲ್ಲಿ ಕಟಾವು ಮಾಡಿರುವ ಈರುಳ್ಳಿ ಕೊಳೆಯುತ್ತಿದ್ದು, ಇದರಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ.

ಸಾವಿರಾರು ರೂಪಾಯಿ ಖರ್ಚು ಮಾಡಿ ಈರುಳ್ಳಿ ಬಿತ್ತನೆ ಮಾಡಿದ್ದು, ಮಳೆಯಿಂದ ಈರುಳ್ಳಿ ಕೊಳೆತು ಹಾಳಾಗುತ್ತಿದೆ. ಸಂಬಂಧ ಪಟ್ಟ ಅಧಿಕಾರಿಗಳು ನಮ್ಮ ಜಮೀನುಗಳಿಗೆ ಭೇಟಿ ನೀಡಿ ಪರಿಶೀಲಿಸಿ ರೈತರ ಕಷ್ಟ ಪರಿಹರಿಸಬೇಕು ಎಂದು ಹನಕುಂಟಿ ಗ್ರಾಮದ ಗೋಣೆಪ್ಪ ಕೋಳಿ, ನಾಗಪ್ಪ ಮರಿಬಸಣ್ಣರ ಮನವಿ ಮಾಡಿದ್ದಾರೆ.

ಉತ್ತಮ ಈರುಳ್ಳಿ ಬೆಳೆಯ ನೀರೀಕ್ಷೆಯಲ್ಲಿದ್ದ ನಮಗೆ ಮಳೆಯಿಂದ ಹಾನಿ ಉಂಟಾಗಿದೆ. ಇದರಿಂದ ನಷ್ಟದ ಭೀತಿ ಎದುರಾಗಿದೆ. ಕೂಡಲೇ ಸರ್ಕಾರ ರೈತರಿಗೆ ನೆರವಿಗೆ ಬರಬೇಕು ಎಂದು ರೈತರು ಒತ್ತಾಯಿಸಿದ್ದಾರೆ.

# ಒಳಮೀಸಲಾತಿ ಜಾರಿ ಹೋರಾಟ ಸಮಿತಿ ಒಕ್ಕೂಟ ಪ್ರತಿಭಟನೆ



ಕೊಪ್ಪಳ, ಅ.18– ಸುಪ್ರೀಂ ಕೋರ್ಟ್‌ನ ತೀರ್ಪಿನ ಪ್ರಕಾರ ರಾಜ್ಯ ಸರ್ಕಾರ ಒಳಮೀಸಲಾತಿ ಜಾರಿ ಮಾಡಬೇಕು ಎಂದು ಒತ್ತಾಯಿಸಿ ಪರಿಶಿಷ್ಟ ಜಾತಿಗಳ ಒಳಮೀಸಲಾತಿ ಜಾರಿ ಹೋರಾಟ ಸಮಿತಿಯ ಜಿಲ್ಲಾ ಒಕ್ಕೂಟದ ಪದಾಧಿಕಾರಿಗಳು ಇಲ್ಲಿನ ಜಿಲ್ಲಾಡಳಿತ ಭವನದ ಎದುರು ಪ್ರತಿಭಟನೆ ನಡೆಸಿದರು.

ಪರಿಶಿಷ್ಟ ಜಾತಿಗಳಲ್ಲಿ ಶೈಕ್ಷಣಿಕವಾಗಿ, ಸಾಮಾಜಿಕವಾಗಿ ಮತ್ತು ಆರ್ಥಿಕವಾಗಿ ಅತಿ ಹೆಚ್ಚು ಹಿಂದುಳಿದ ಜಾತಿಗಳ ಅಭಿವೃದ್ಧಿಯ ಉದ್ದೇಶದಿಂದಾಗಿ ಆಯಾ ಜಾತಿಗಳಿಗೆ ಸೇರಿದವರಿಗೆ ಮೀಸಲಾತಿ ಸೌಲಭ್ಯ ತಲುಪಲು ಒಳಮೀಸಲಾತಿ ನೀಡುವ ಸಾಂವಿಧಾನಿಕ ಅಧಿಕಾರ ಆಯಾ ರಾಜ್ಯಗಳಿಗೆ ಇದೆ ಎಂದು ಸುಪ್ರೀಂ ಕೋರ್ಟ್ ಸ್ಪಷ್ಟವಾಗಿ ಹೇಳಿದ್ದು, ರಾಜ್ಯ ಸರ್ಕಾರ ಇದನ್ನು ಅನುಷ್ಠಾನಕ್ಕೆ ತರಬೇಕು ಎಂದು ಆಗ್ರಹಿಸಿದರು.

ಪರಿಶಿಷ್ಟ ಜಾತಿಗಳು ಸಾಮಾಜಿಕವಾಗಿ ಏಕರೂಪಿಯಾಗಿಲ್ಲ ಎಂದು ಏಳು ಜನ ನ್ಯಾಯಮೂರ್ತಿಗಳನ್ನು ಒಳಗೊಂಡ ಸಂವಿಧಾನ ಪೀಠ ಹೇಳಿದೆ. ಅದರಂತೆ ರಾಜ್ಯ ಕಾಂಗ್ರೆಸ್ ಸರ್ಕಾರ ನಡೆದುಕೊಳ್ಳಬೇಕು. ಹಿಂದಿನ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ತನ್ನ ಪ್ರಣಾಳಿಕೆಯಲ್ಲಿ ತನ್ನ ಆರನೇ ಗ್ಯಾರಂಟಿಯಾಗಿ ಒಳಮೀಸಲಾತಿ ಕಲ್ಪಿಸಿಕೊಡುವುದಾಗಿ ಹೇಳಿತ್ತು. ಈ ಮಾತು ಉಳಿಸಿಕೊಳ್ಳಬೇಕು.ಒಳ ಮೀಸಲಾತಿ ಜಾರಿಯಾಗುವ ತನಕ ಬ್ಯಾಕ್‌ಲಾಗ್ ಮತ್ತು ಇತರೆ ನೇಮಕಾತಿಗಳನ್ನು ರದ್ದುಪಡಿಸಬೇಕು ಎಂದು ಒತ್ತಾಯಿಸಿದರು.

ಅಖಿಲ ಭಾರತ ಮಾದಿಗ ದಂಡೋರ ಸಮಿತಿ ಜಿಲ್ಲಾಧ್ಯಕ್ಷ ಡಿ.ಹುಲ್ಲೇಶ ಬುದಗುಂಪ, ರಾಜ್ಯ ಸಂಘಟನಾ ಸಂಚಾಲಕ ಬಿ.ಹುಸೇನಪ್ಪ ಸ್ವಾಮಿ ಮಾದಿಗ, ಸಮಾಜದ ಪ್ರಮುಖರಾದ ಹುಲುಗಪ್ಪ ಹಿರೇಮನಿ ಬೇವೂರು, ಶರಣಪ್ಪ ಕನಕಗಿರಿ, ಮೈಲಾರಪ್ಪ ವಕೀಲ, ಶಂಕರ ಸಿದ್ದಾಪುರ, ಗಂಗಾವತಿಯ ಎಸ್. ದುರಗಪ್ಪ ಸೇರಿ ನೂರಾರು ಜನರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಹೋರಾಟ ನಿರತರು ಜಿಲ್ಲಾಡಳಿತ ಭವನದ ಗೇಟ್ ಬಳಿ ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿಗೆ ಮನವಿ ಸ್ವೀಕರಿಸಲು ಸಜ್ಜಾಗಿದ್ದರು. ಹೆಚ್ಚುವರಿ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಮನವಿ ಸ್ವೀಕರಿಸಲು ಬಂದರೂ ಖುದ್ದು ಜಿಲ್ಲಾಧಿಕಾರಿಯೇ ಬರಬೇಕು ಎಂದು ಸಂಘಟನೆಯವರು ಪಟ್ಟು ಹಿಡಿದು ಜಿಲ್ಲಾಡಳಿತ ಭವನದ ಪ್ರವೇಶದ್ವಾರದ ಬಳಿ ಬಂದು ಪ್ರತಿಭಟಿಸಿದರು. ಬಳಿಕ ಜಿಲ್ಲಾಧಿಕಾರಿ ನಲಿನ್ ಅತುಲ್ ಬಂದು ಮನವಿ ಸ್ವೀಕರಿಸಿದರು.

# ಕೊಪ್ಪಳ ಮಾರ್ಗದಲ್ಲಿ ರೈಲು ಪುನರಾರಂಭ: ಜನತೆಗೆ ಅನುಕೂಲ

ಕೊಪ್ಪಳ, ಅ.18– ಬೆಳಗಾವಿ ಮತ್ತು ತೆಲಂಗಾಣದ ಮನುಗೂರು ನಡುವೆ ವಿಶೇಷ ರೈಲು ಸಂಚಾರ ಮತ್ತೆ ಆರಂಭಿಸಲಾಗಿದ್ದು, ಇದು ಕೊಪ್ಪಳದ ಮಾರ್ಗದ ಮೂಲಕ ಸಂಚರಿಸಲಿರುವ ಕಾರಣ ಇಲ್ಲಿಯ ಜನರಿಗೆ ಅನುಕೂಲವಾಗಲಿದೆ.

ದಸರಾ, ದೀಪಾವಳಿ, ಛತ್, ಕ್ರಿಸ್‌ಮಸ್ ಮತ್ತು ಪೊಂಗಲ್ ಹಬ್ಬದ ಋತುಗಳಲ್ಲಿ ಹೆಚ್ಚುವರಿ ಪ್ರಯಾಣಿಕರ ಬೇಡಿಕೆ ಪೂರೈಸಲು ಬೆಳಗಾವಿ ಮತ್ತು ಮನುಗೂರು ನಿಲ್ದಾಣಗಳ ನಡುವೆ ವಿಶೇಷ ರೈಲು ವಾರದಲ್ಲಿ ನಾಲ್ಕು ದಿನ ಸಂಚರಿಸಲು ರೈಲ್ವೆ ಮಂಡಳಿ ಅನುಮೋದನೆ ನೀಡಿದೆ.

ಕಾರ್ಯಾಚರಣೆ ಆರಂಭಿಸಿರುವ ಈ ರೈಲು 2025ರ ಮಾರ್ಚ್ ಅಂತ್ಯದ ತನಕ ಪ್ರಯಾಣಿಕರ ಬೇಡಿಕೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತವೆ, ಈ ಬಿಡುವಿಲ್ಲದ ಋತುವಿನಲ್ಲಿ ಪ್ರಯಾಣಿಕರಿಗೆ ಹೆಚ್ಚಿನ ಅನುಕೂಲ ಒದಗಿಸುತ್ತದೆ ಎಂದು ನೈರುತ್ಯ ರೈಲ್ವೆಯ ಮುಖ್ಯ ಸಾರ್ವಜನಿಕ ಸಂಪರ್ಕ ಅಧಿಕಾರಿ ಮಂಜುನಾಥ ಕನಮಡಿ ತಿಳಿಸಿದ್ದಾರೆ.

ಈ ರೈಲು (07335) ಪ್ರತಿ ಭಾನುವಾರ, ಬುಧವಾರ, ಶನಿವಾರ ಮತ್ತು ಮಂಗಳವಾರ ಬೆಳಗಾವಿಯಿಂದ ಮಧ್ಯಾಹ್ನ 12:30ಕ್ಕೆ ಹೊರಟು ಮರುದಿನ ಮಧ್ಯಾಹ್ನ 12:50ಕ್ಕೆ ಮನುಗೂರು ನಿಲ್ದಾಣಕ್ಕೆ ತಲುಪಲಿದೆ.

ರೈಲು ಸಂಖ್ಯೆ 07336 ಮನುಗೂರು–ಬೆಳಗಾವಿ ವಿಶೇಷ ಎಕ್ಸ್ ಪ್ರೆಸ್ ಅ. 17ರಿಂದ ಮಾ. 31ರ ಅವಧಿಯಲ್ಲಿ ಒಟ್ಟು 95 ಟ್ರಿಪ್‌ಗಳಲ್ಲಿ ಚಲಿಸಲಿದೆ. ಪ್ರತಿ ಸೋಮವಾರ, ಗುರುವಾರ, ಭಾನುವಾರ ಮತ್ತು ಬುಧವಾರ ಮನುಗೂರು ನಿಲ್ದಾಣದಿಂದ ಮಧ್ಯಾಹ್ನ 3:40ಕ್ಕೆ ಹೊರಟು, ಮರುದಿನ ಸಂಜೆ 4 ಗಂಟೆಗೆ ಬೆಳಗಾವಿ ನಿಲ್ದಾಣಕ್ಕೆ ಆಗಮಿಸಲಿದೆ.

ಈ ರೈಲು ಖಾನಾಪುರ, ಲೋಂಡಾ, ಅಳ್ನಾವರ, ಧಾರವಾಡ, ಹುಬ್ಬಳ್ಳಿ, ಗದಗ, ಕೊಪ್ಪಳ, ಹೊಸಪೇಟೆ, ತೋರಣಗಲ್ಲು, ದರೋಜಿ, ಬಳ್ಳಾರಿ, ಗುಂತಕಲ್, ಆದೋನಿ, ಕೋಸ್ಗಿ, ಮಂತ್ರಾಲಯಂ ರೋಡ್, ರಾಯಚೂರು, ಕೃಷ್ಣಾ, ಯಾದಗಿರಿ, ಚಿತ್ತಾಪುರ, ಮಳಖೇಡ ರೋಡ್, ಸೇಡಂ, ತಾಂಡೂರು, ವಿಕಾರಾಬಾದ್, ಲಿಂಗಂಪಲ್ಲಿ, ಬೇಗಂಪೇಟ್, ಸಿಕಂದರಾಬಾದ್, ಭೋಂಗೀರ್, ಜನಾಂವ್, ಕಾಜಿಪೇಟ್, ವಾರಂಗಲ್, ಕೇಸಮುದ್ರಂ, ಮಹಬೂಬಾಬಾದ್, ದೊರಣಕಲ್, ಗಾಂಧಿಪುರಂ ಹಾಲ್ಟ್, ಮತ್ತು ಭದ್ರಾಚಲಂ ರೋಡ್ ನಿಲ್ದಾಣಗಳಲ್ಲಿ ನಿಲುಗಡೆಯಾಗಲಿದೆ.

ಈ ವಿಶೇಷ ರೈಲಿನಲ್ಲಿ 1 ಎಸಿ ಟು ಟೈಯರ್, 2 ಎಸಿ ತ್ರಿ ಟೈಯರ್, 9 ಸ್ಲೀಪರ್ ಕ್ಲಾಸ್, 4 ಸಾಮಾನ್ಯ ದ್ವಿತೀಯ ದರ್ಜೆ ಮತ್ತು 2 ಎಸ್‌ಎಲ್‌ಆರ್‌ಡಿ ಸೇರಿದಂತೆ ಒಟ್ಟು 18 ಬೋಗಿಗಳು ಇರಲಿವೆ ಎಂದು ಅವರು ಹೇಳಿದ್ದಾರೆ.

# ಸಾಗರ ಕವಚ ಅಣಕು ಕಾರ್ಯಾಚರಣೆ: ಕರಾವಳಿಯಲ್ಲಿ ತೀವ್ರ ಕಟ್ಟೆಚ್ಚರ



ಕಾರವಾರ, ಅ.18– ಇಲ್ಲಿನ ಕೋಡಿಬಾಗದ ಕಾಳಿ ಸೇತುವೆಯ ಬುಡದಲ್ಲಿ ಬಾಂಬ್ ಇಡಲು ಯತ್ನಿಸಿದವನನ್ನು ಕರಾವಳಿ ಕಾವಲು ಪಡೆಯ ಸಿಬ್ಬಂದಿ ಬಂಧಿಸಿದರು. ಈ ಘಟನೆಗೆ ಕೆಲ ನಿಮಿಷಗಳ ಮೊದಲು ಕೂರ್ಮಗಡ ದ್ವೀಪದ ಬಳಿ ಆರು ಬಾಂಬ್ ಹೊತ್ತು ಮಾಜಾಳಿಯ ದಾಂಡೇಬಾಗದ ಮೀನುಗಾರಿಕೆ ಬಂದರಿಗೆ ಸಾಗಲು ಯತ್ನಿಸುತ್ತಿದ್ದ ತಂಡವನ್ನು ವಶಕ್ಕೆ ಪಡೆಯಲಾಯಿತು!

ಇಂತಹ ಅಣಕು ಕಾರ್ಯಾಚರಣೆಗೆ ಸಾಕ್ಷಿಯಾಗಿದ್ದು ಸಾಗರ ಕವಚ ಅಣಕು ಕಾರ್ಯಾಚರಣೆ. ನೌಕಾನೆಲೆ, ವಾಣಿಜ್ಯ ಬಂದರು, ಕೈಗಾ ಅಣುಸ್ಥಾವರ ಸೇರಿದಂತೆ ಸೂಕ್ಷ್ಮ ಸ್ಥಳವನ್ನು ಒಳಗೊಂಡಿರುವ ಜಿಲ್ಲೆಯ ಕರಾವಳಿ ಭಾಗದಲ್ಲಿ ಭದ್ರತೆ ತಪಾಸಣೆಗೆ ಆಗಾಗ ನಡೆಸಲಾಗುವ ಕಾರ್ಯಾಚರಣೆಯ ಭಾಗವಾಗಿರುವ ಸಾಗರ ಕವಚ ಕಾರ್ಯಾಚರಣೆಯ ಮೊದಲ ದಿನ ಜಿಲ್ಲೆಯಲ್ಲಿ ಒಟ್ಟು 2 ಕಡೆಯಲ್ಲಿ 7 ಬಾಂಬ್ ಪತ್ತೆ ಹಚ್ಚಲಾಯಿತು.

ಅಣಕು ಕಾರ್ಯಾಚರಣೆಗೆ ಚಾಲನೆ ಸಿಕ್ಕಿತು. ಮುಂಜಾನೆಯ ವೇಳೆಯಲ್ಲಿಯೇ ಹುಸಿ ಬಾಂಬ್‌ನ್ನು ಹೊತ್ತು ತಂದವರನ್ನು ಕರಾವಳಿ ಕಾವಲು ಪಡೆ ಸಿಬ್ಬಂದಿ ಸಮುದ್ರದಲ್ಲೇ ತಡೆದು ವಶಕ್ಕೆ ಪಡೆದರು. ಸಂಜೆಯವರೆಗೂ ಎಲ್ಲೆಡೆ ಬಿಗಿಭದ್ರತೆ ಕೈಗೊಳ್ಳಲಾಗಿತ್ತು. ಜಿಲ್ಲಾಧಿಕಾರಿ ಕಚೇರಿ, ಆಕಾಶವಾಣಿ ಕೇಂದ್ರ ಸೇರಿದಂತೆ ಪ್ರಮುಖ ಸರ್ಕಾರಿ ಕಚೇರಿಗಳ ಎದುರು ಪೊಲೀಸರು ಕಾವಲು ನಿಂತಿದ್ದರು.

ರಾಷ್ಟ್ರೀಯ ಹೆದ್ದಾರಿಯ ಅಲ್ಲಲ್ಲಿ ತಾತ್ಕಾಲಿಕ ಚೆಕ್‌ಪೋಸ್ಟ್ ಸ್ಥಾಪಿಸಿ ವಾಹನಗಳ ಮೇಲೆ ನಿಗಾ ಇಡುವ ಕೆಲಸವನ್ನೂ ಮಾಡಲಾಯಿತು. ತಟರಕ್ಷಕ ದಳ, ಕರಾವಳಿ ಕಾವಲು ಪಡೆ, ನೌಕಾದಳದ ಸಿಬ್ಬಂದಿ ಸಮುದ್ರ ಮಾರ್ಗದಲ್ಲಿ ಗಸ್ತು ತಿರುಗಿದರು.

ಜಿಲ್ಲೆಯ ಹಲವು ರೈಲ ನಿಲ್ದಾಣ, ಕೈಗಾ ಅಣುಸ್ಥಾವರಕ್ಕೆ ಬಿಗಿಭದ್ರತೆ ಒದಗಿಸಲಾಗಿತ್ತು. ಅಣುಸ್ಥಾವರಕ್ಕೆ ಬಾಂಬ್ ನಿಗ್ರಹ ದಳದ ಸಿಬ್ಬಂದಿಯೂ ಭೇಟಿ ನೀಡಿದ್ದರು.

ಸಾಗರ ಕವಚ ಅಣಕು ಕಾರ್ಯಾಚರಣೆಯಲ್ಲಿ ಪೊಲೀಸರೇ ಉಗ್ರರ ವೇಷದಲ್ಲಿ ಹುಸಿ ಬಾಂಬ್ ಹೊತ್ತು ಬರುತ್ತಾರೆ. ಅವರ ಬಳಿ ಇರುವ ಬಾಂಬ್ ಪತ್ತೆ ಹಚ್ಚುವ ಕೆಲಸವನ್ನು ಭದ್ರತಾ ಸಿಬ್ಬಂದಿ ಮಾಡಬೇಕಾಗುತ್ತದೆ. ಹುಸಿ ಬಾಂಬ್ ಹೊತ್ತು ತರುವವವರನ್ನು ರೆಡ್ ಫೋಸ್ಟ್ ಅಂತಲೂ, ಕಾರ್ಯಾಚರಣೆಯಲ್ಲಿ ತೊಡಗಿರುವ ಸಿಬ್ಬಂದಿಯನ್ನು ಬ್ಲ್ಯೂ ಫೋರ್ಸ್ ಅಂತಲೂ ಕರೆಯುತ್ತಾರೆ. ಒಂದು ವೇಳೆ ರೆಡ್ ಫೋರ್ಸ್ ಸಿಬ್ಬಂದಿ ಬಾಂಬ್‌ನ್ನು ನಿಗದಿತ ಸ್ಥಳಕ್ಕೆ ತಂದು ಇಟ್ಟರೆ, ಭದ್ರತೆ ವಿಚಾರದಲ್ಲಿ ಬ್ಲ್ಯೂ ಫೋರ್ಸ್ ಎಡವಿದೆ ಎಂದು ಬಿಂಬಿತವಾಗುತ್ತದೆ. ಅದಕ್ಕೆ ಆಸ್ಪದ ನೀಡದಂತೆ ಕಟ್ಟೆಚ್ಚರವಹಿಸಲಾಗುತ್ತದೆ ಎನ್ನುತ್ತಾರೆ ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು.

# ಶೈಕ್ಷಣಿಕ ರಂಗಕ್ಕೆ ಹೆಚ್ಚಿನ ಆದ್ಯತೆ: ರಾಯರಡ್ಡಿ



ಕುಕನೂರು, ಅ.18– ಕ್ಷೇತ್ರದಲ್ಲಿ ಶೈಕ್ಷಣಿಕ ಕ್ಷೇತ್ರದ ಅಭಿವೃದ್ಧಿಯಾಗಬೇಕು ಎಂಬ ಉದ್ದೇಶದಿಂದ ಶೈಕ್ಷಣಿಕ ರಂಗಕ್ಕೆ ಹೆಚ್ಚಿನ ಆದ್ಯತೆ ನೀಡಲಾಗಿದ್ದು, ಯಲಬುರ್ಗಾ ಕ್ಷೇತ್ರದಲ್ಲಿ ಅತಿ ಹೆಚ್ಚು ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿವೆ. ಪ್ರೌಢಶಾಲೆ, ಪದವಿ ಪೂರ್ವ ಕಾಲೇಜುಗಳನ್ನು ಮಂಜೂರು ಮಾಡಿಸಿ ಆರಂಭಿಸಿದ್ದೇನೆ ಎಂದು ಸಿ.ಎಂ. ಆರ್ಥಿಕ ಸಲಹೆಗಾರ ಬಸವರಾಜ ರಾಯರಡ್ಡಿ ಹೇಳಿದರು.

ತಾಲ್ಲೂಕಿನ ಕದ್ರಳ್ಳಿ ಗ್ರಾಮದಲ್ಲಿ ಅಂಗನವಾಡಿ ಕೇಂದ್ರ ಉದ್ಘಾಟಿಸಿ ಮಾತನಾಡಿದ ಅವರು, ಅಂಗನವಾಡಿಯಲ್ಲಿ ಮಕ್ಕಳ ಕಲಿಕೆಗೆ ಪೂರಕ ವಾತಾವರಣ ಸೃಷ್ಟಿಸಬೇಕು. ಮಕ್ಕಳಿಗೆ ಸರಿಯಾಗಿ ಪೌಷ್ಟಿಕ ಆಹಾರ ನೀಡಬೇಕು. ಅಂಗನವಾಡಿಗಳ ಸ್ವಚ್ಛತೆ ಬಗ್ಗೆ ಕಾಳಜಿ ವಹಿಸುವುದರ ಜತೆಗೆ ಇಲ್ಲಿನ ಮಕ್ಕಳನ್ನು ತಮ್ಮ ಸ್ವಂತ ಮಕ್ಕಳು ಎಂದು ಭಾವಿಸಬೇಕು ಎಂದರು.

ಕುದರಿಮೋತಿ, ಚಿಕ್ಕಬೀಡನಾಳ ಗ್ರಾಮಗಳಲ್ಲಿ ಹಾನಿಯಾದ ಬೆಳೆಗಳನ್ನು ಕಂದಾಯ ಇಲಾಖೆ ಅಧಿಕಾರಿಗಳು ಕೂಡಲೇ ಸಮೀಕ್ಷೆ ಮಾಡಿ ವರದಿ ಸಲ್ಲಿಸಬೇಕು. ಬೆಳೆ ಹಾನಿಯಾದ ರೈತರಿಗೆ ಪರಿಹಾರ ನೀಡಲು ಪೂರಕ ಮಾಹಿತಿ ಪಡೆದು ಬೆಳೆ ಹಾನಿ ನೀಡಬೇಕು ಎಂದು ಸೂಚಿಸಿದರು.

ಕ್ಷೇತ್ರದ ಜನರು ತಾಲ್ಲೂಕಿನ ವಿವಿಧ ಅಭಿವೃದ್ಧಿ ಕಾರ್ಯಕ್ಕೆ ಸಹಕಾರ ನೀಡಬೇಕು. ಯಾವುದೇ ಸಾರ್ವಜನಿಕ ಕೆಲಸ ಕಾರ್ಯ ಗಳಿದ್ದಲ್ಲಿ ಗಮನಕ್ಕೆ ತನ್ನಿ ಎಂದರು.

ತಹಶೀಲ್ದಾರ್ ಎಚ್. ಪ್ರಾಣೇಶ, ತಾಲ್ಲೂಕು ಪಂಚಾಯಿತಿ ಇಒ ಸಂತೋಷ್ ಬಿರಾದಾರ್, ಸಂಗಮೇಶ್ ಗುತ್ತಿ, ಬಸವರಾಜ್ ಉಳ್ಳಾಗಡ್ಡಿ, ಯಂಕಣ್ಣ ಯರಾಶಿ, ಮಂಜುನಾಥ್ ಕಡೆಮನಿ, ರೆಹಮಾನ್ ಸಾಬ್ ಮಕಪ್ನವರ್ ಇದ್ದರು.

## ಅಂಬೇಡ್ಕರ್ ಅಭಿವೃದ್ಧಿ ನಿಗಮದ ಉದ್ಯೋಗಿ ಆತ್ಮಹತ್ಯೆ

ಕಾರವಾರ, ಅ.18– ಇಲ್ಲಿನ ಡಾ.ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದ ಕಚೇರಿಯಲ್ಲಿ ಒಳಗುತ್ತಿಗೆ ಆಧಾರದಲ್ಲಿ ಕೆಲಸ ಮಾಡುತ್ತಿದ್ದ ಬಿಣಗಾ ಮಾಳಸಾವಾಡಾದ ರಾಧಾ ಮುರಾರಿ ನಾಯ್ಕ (52) ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ರಾಧಾ ಮೃತದೇಹವು ಮನೆ ಪಕ್ಕದ ಬಾವಿಯಲ್ಲಿ ಮಂಗಳವಾರ ತಡರಾತ್ರಿ ಪತ್ತೆಯಾಗಿದೆ. ಕೆಲಸದ ಒತ್ತಡದಿಂದ ಮಾನಸಿಕ ಖಿನ್ನತೆಗೆ ಒಳಗಾಗಿದ್ದ ರಾಧಾ, ಕುಟುಂಬಸ್ಥರ ಬಳಿ ಒತ್ತಡದ ಕುರಿತು ಸಮಸ್ಯೆ ಹೇಳಿಕೊಂಡಿದ್ದರು. ಕಳೆದ ಒಂದು ವರ್ಷದಿಂದ ಕೆಲಸಕ್ಕೂ ಹೋಗದಿದ್ದ ಅವರು, ಮೂರು ದಿನಗಳ ಹಿಂದೆ ಕೆಲಸಕ್ಕೆ ಪುನಃ ಸೇರಿದ್ದರು. ಕೆಲಸಕ್ಕೆ ಹೋಗಲಾರಂಭಿಸಿದ ಬಳಿಕ ಪುನಃ ಒತ್ತಡದ ನೆಪ ಹೇಳಿದ್ದ ಅವರು ಖಿನ್ನತೆಯಿಂದಲೇ ಆತ್ಮಹತ್ಯೆ ಮಾಡಿಕೊಂಡಿರುವ ಶಂಕೆ ಇದೆ ಎಂದು ಮೃತಳ ಸಹೋದರ ನೀಡಿದ ದೂರು ಆಧರಿಸಿ ಪ್ರಕರಣ ದಾಖಲಿಸಲಾಗಿದೆ ಎಂದು ನಗರ ಠಾಣೆ ಪೊಲೀಸರು ತಿಳಿಸಿದ್ದಾರೆ.

## ಚೆಕ್‌ಪೋಸ್ಟ್‌ನಲ್ಲಿ ಅಬಕಾರಿ ಸಿಬ್ಬಂದಿ ಹಲ್ಲೆ: ಆರೋಪ

ಕಾರವಾರ, ಅ.18– ತಾಲ್ಲೂಕಿನ ಮಾಜಾಳಿಯ ಚೆಕ್‌ಪೋಸ್ಟ್ ನಲ್ಲಿ ವಾಹನ ತಪಾಸಣೆ ನೆಪದಲ್ಲಿ ಅಬಕಾರಿ ಇಲಾಖೆ ಸಿಬ್ಬಂದಿ ತನ್ನ ಮೇಲೆ ಹಲ್ಲೆ ನಡೆಸಿ, ದುರ್ವರ್ತನೆ ತೋರಿದ್ದಾರೆ ಎಂದು ಬೆಂಗಳೂರು ಮೂಲದ ಚಾಲಕರೊಬ್ಬರು ಆರೋಪಿಸಿರುವ ದೃಶ್ಯ ಸಾಮಾಜಿಕ ಮಾಧ್ಯಮದಲ್ಲಿ ಹರಿದಾಡಿದೆ.

ಗೋವಾದಿಂದ ಕೇರಳಕ್ಕೆ ಸಾಗಾಟ ಮಾಡಲು ವಾಟರ್ ಫಿಲ್ಟರ್ ವಾಹನದಲ್ಲಿ ತುಂಬಿಕೊಂಡು ಸಾಗುತ್ತಿದ್ದೆ. ಮಾಜಾಳಿ ಚೆಕ್‌ಪೋಸ್ಟ್ ನಲ್ಲಿ ತಪಾಸಣೆ ಸಲುವಾಗಿ ವಾಹನದಲ್ಲಿರುವ ಪೆಟ್ಟಿಗೆ ಇಳಿಸಲು ಅಬಕಾರಿ ಸಿಬ್ಬಂದಿ ಸೂಚಿಸಿದರು. ಹಗ್ಗಗಳನ್ನು ಬಿಚ್ಚಿದರೆ ಕಟ್ಟಲು ಕಷ್ಟ ಎಂದು ಮನವಿ ಮಾಡಿದ್ದೆ. ಇದೇ ಕಾರಣಕ್ಕೆ ತನ್ನನ್ನು ಪಕ್ಕದಲ್ಲಿರುವ ಕಚೇರಿ ಕೊಠಡಿಗೆ ಕರೆದೊಯ್ದು, ಮೊಬೈಲ್ ಕಸಿದು ಹಲ್ಲೆ ಮಾಡಿದ್ದಾರೆ. ಹಲ್ಲೆ ಮಾಡಿದ ರಭಸಕ್ಕೆ ಎಡಭಾಗದ ಕಿವಿ ಕೇಳಿಸದಂತಾಗಿದೆ ಎಂದು ಚಾಲಕ ಎ.ಆರ್.ಕುಮಾರ್ ಎಂಬುವವರು ಆರೋಪಿಸಿ, ದೃಶ್ಯ ಚಿತ್ರೀಕರಿಸಿ ಹರಿಬಿಟ್ಟಿದ್ದಾರೆ.

ಸಿಬ್ಬಂದಿ ತಪಾಸಣೆ ಸಲುವಾಗಿ ವಾಹನ ನಿಲ್ಲಿಸಿದಾಗ ಅವರೊಂದಿಗೆ ಚಾಲಕ ಅನುಚಿತವಾಗಿ ವರ್ತಿಸಿದ ಎಂಬ ಮಾಹಿತಿ ಬಂದಿದೆ. ಆದರೂ ಕೂಲಂಕಷ ತನಿಖೆಗೆ ಸೂಚಿಸಿದ್ದೇನೆ. ಸಿಬ್ಬಂದಿ ತಪ್ಪಿದ್ದರೆ ಸೂಕ್ತ ಕ್ರಮ ಜರುಗಿಸುತ್ತೇವೆ ಎಂದು ಅಬಕಾರಿ ಉಪ ಆಯುಕ್ತ ಜಗದೀಶ ಕುಲಕರ್ಣಿ ಪ್ರತಿಕ್ರಿಯಿಸಿದ್ದಾರೆ.

# ಉದ್ಯೋಗ ಖಾತ್ರಿ ಯೋಜನೆ ಸದ್ಬಳಕೆಗೆ ಇಓ ಕರೆ




**ಕಾಗವಾಡ: 2025–26 ಸಾಲಿನ ಕಾರ್ಮಿಕ ಆಯವ್ಯಯ ತಯಾ–ರಿಸಲು ಒಂದು ತಿಂಗಳ ಕಾಲ ತಾಲೂಕಿನ 8 ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಉದ್ಯೋಗ ಖಾತರಿ ನಡೆಗೆ ಸಬಲತೆಯೆಡೆಗೆ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಕಾರ್ಯನಿರ್ವಾಹಕ ಅಧಿಕಾರಿ ಸುರೇಶ ಕದ್ದು ತಿಳಿಸಿದರು.**

ಇಲ್ಲಿನ ತಾಲ್ಲೂಕು ಪಂಚಾಯತ ಕಚೇರಿ ಆವರಣದಲ್ಲಿ ಶುಕ್ರವಾರ ಉದ್ಯೋಗ ಖಾತರಿ ನಡೆಗೆ ಸಬಲತೆಯೆಡೆಗೆ ಅಭಿಯಾನ ನಿಮಿತ್ತ ಉದ್ಯೋಗ ವಾಹಿನಿ ರಥಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ತಾಲೂಕಿನ ಎಲ್ಲ ಗ್ರಾಮಗಳಲ್ಲಿ ಉದ್ಯೋಗ ವಾಹಿನಿ ರಥ ಸಂಚರಿಸಿ ಸಾರ್ವಜನಿಕರಿಗೆ ನರೇಗಾ ಯೋಜನೆಯಡಿ ದೊರೆಯುವ ಸಮುದಾಯ & ವೈಯಕ್ತಿಕ ಕಾಮಗಾರಿ ಸೌಲಭ್ಯ, ವೈಯಕ್ತಿಕ ಕಾಮಗಾರಿ ಪಡೆಯಲು ಇರಬೇಕಾದ ಅರ್ಹತೆಗಳು, ಗಂಡು ಹೆಣ್ಣಿಗೆ ಸಮಾನ ಕೂಲಿ, ಹಿರಿಯ ನಾಗರಿಕರಿಗೆ , ವಿಶೇಷ ಚೇನರಿಗೆ ಶೇ 50 ರಷ್ಟು ರಿಯಾಯತಿ ಸಿಗಲಿದೆ ಎಂದು ತಿಳಿಸಿದರು.

ಉದ್ಯೋಗ, ಆಹಾರಭದ್ರತೆ, ದರ್ಘಕಾಲ ಬಾಳಿಕೆ ಬರುವಂತಹ ಸ್ವತ್ತುಗಳ ನಿರ್ಮಾಣ ಮುಂತಾದ ಕಾರ್ಯಕ್ರಮಗಳನ್ನು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಕೈಗೊಳ್ಳಲಾಗುತ್ತಿದೆ ಎಂದರು.

ಈ ಸಂದರ್ಭದಲ್ಲಿ ಪ.ರಾಜ್ ಸಹಾಯಕ ನಿರ್ದೇಶಕ ಎ.ಡಿ.ಅನ್ಸಾರಿ, ಐಇಸಿ ಸಂಯೋಜಕ ಅಮೀತ ಇಂಗಳಗಾಂವಿ, ತಾಲ್ಲೂಕು ಪಂಚಾಯತ ಸಿಬ್ಬಂದಿಗಳಾದ ಸುರೇಶ ಕಾಂಬಳೆ, ಆದಿನಾಥ ಚೌಗಲೆ, ಪ್ರದೀಪ್ ಆದಗೊಂಡ, ಸತೀಶ ಬೆಕ್ಕೇರಿ, ಕಲಗೌಡಾ ಪಾಟೀಲ್, ಪ್ರದೀಪ, ಆನಂದ ಕಾಂಬಳೆ ಮುಂತಾದವರು ಇದ್ದರು.





ಕಿತ್ತೂರು ಉತ್ಸವ 2024 ನೆ 200 ವರ್ಷದ ಕಿತ್ತೂರು ಚನ್ನಮ್ಮ ಜ್ಯೋತಿ ಕರ್ನಾಟಕ ಮಹಾರಾಷ್ಟ್ರ ಗಾಡಿ ಪ್ರದೇಶ ಕಾಗವಾಡ ತಾಲೂಕಿಗೆ ಆಗಮಿಸಿದೆ  ಕಿತ್ತೂರು ಚನ್ನಮ್ಮ ಜ್ಯೋತಿ ಯನ್ನು ತಾಲೂಕ ಆಡಳಿತ ಅಧಿಕಾರಿ ರಾಜೇಶ್ ಬುರ್ಲಿ ಸಾಹೇಬರು ಹಾಗೂ ತಾಲೂಕ ಪಂಚಾಯತ್ ಆಡಳಿತ ಅಧಿಕಾರಿ ಕದ್ದು ಸರ್ ಹಾಗೂ ಸಿ ಡಿ ಪಿ ಓ ಸಂಜಯ ಸದಲಗಿ  ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿ ಎಂ ಆರ್ ಮುಂಜೆ ಸರ್ ಹಾಗೂ ಕಾಗವಾಡ ಮುಖಂಡರು ರಮೇಶ್ ಚೌಗಲಾ ಹಾಗೂ ಜ್ಯೋತಿ ಪಾಟೀಲ್ ಕಾಕಾ ಪಾಟೀಲರು ಜಯಕರ್ನಾಟಕ ಸಂಘಟನೆ ಅಧ್ಯಕ್ಷರು ಬಸವರಾಜ್ ಮಗದುಮ್ ಉಪಾಧ್ಯಕ್ಷ ಬಾಳು ಕೋರೆ ಹಾಗೂ ಅಂಗನವಾಡಿ ಕಾರ್ಯಕರ್ತೆಯರು ಮತ್ತೆ ಆಶಾ ಕಾರ್ಯಕರ್ತೆಯರು ತಾಲೂಕ ಆಡಳಿತ  ನೇತೃತ್ವದಲ್ಲಿ ಜ್ಯೋತಿ ಬರಮಾಡಿಕೊಂಡೇವು

# ವಿಜಯೋತ್ಸವ: ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಿ



ಬೈಲಹೊಂಗಲ, ಅ.18– ಪಟ್ಟಣದ ಕಲ್ಮಠ ಗಲ್ಲಿಯಲ್ಲಿರುವ ವೀರರಾಣಿ ಕಿತ್ತೂರು ಚನ್ನಮ್ಮನ ಸಮಾಧಿ ಹತ್ತಿರ ವೀರರಾಣಿ ಕಿತ್ತೂರು ಚನ್ನಮ್ಮನ 200ನೇ ವಿಜಯೋತ್ಸವದ ಅಂಗವಾಗಿ ಅ.22 ರಂದು ಒಂದು ದಿನದ ವಿಶೇಷ ಉಪನ್ಯಾಸ, ಸಾಂಸ್ಕೃತಿಕ ಕಾರ್ಯಕ್ರಮ ನಡೆಸಬೇಕು ಎಂದು ವೀರರಾಣಿ ಕಿತ್ತೂರು ಚನ್ನಮ್ಮನ ಸ್ಮರಣೋತ್ಸವ ಸಮಿತಿ ಹಾಗೂ ಚನ್ನಮ್ಮನ ಅಭಿಮಾನ ಬಳಗದಿಂದ ಉಪವಿಭಾಗಧಿಕಾರಿ ಮೂಲಕ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಜಿಲ್ಲಾ ಉಸ್ತುವಾರಿ ಸಚಿವ, ಜಿಲ್ಲಾಧಿಕಾರಿ, ಶಾಸಕರಾದ ಮಹಾಂತೇಶ ಕೌಜಲಗಿ, ಬಾಬಾಸಾಹೇಬ ಪಾಟೀಲ ಅವರಿಗೆ ಮನವಿ ಸಲ್ಲಿಸಲಾಯಿತು.

ವಕೀಲ ಎಫ್.ಎಸ್.ಸಿದ್ದನಗೌಡರ, ಮುರಗೇಶ ಗೂಂಡ್ಲೂರ ಮಾತನಾಡಿ, ವೀರರಾಣಿ ಕಿತ್ತೂರು ಚನ್ನಮ್ಮನ 200ನೇ ವರ್ಷದ ವಿಜಯೋತ್ಸವ ಕಿತ್ತೂರು ನಾಡಿನಲ್ಲಿ ಅ. 23,24 ಮತ್ತು 25 ರಂದು ಆಚರಿಸುತ್ತಿರುವುದು ಶ್ಲಾಘನೀಯ. ಆದರೆ, ಚನ್ನಮ್ಮನ ವೀರಸಮಾಧಿ ಸ್ಥಳ ಬೈಲಹೊಂಗಲದಲ್ಲಿ ಸರ್ಕಾರ ಯಾವುದೇ ಕಾರ್ಯಕ್ರಮ ಹಮ್ಮಿಕೊಳ್ಳದೆ ನಿರ್ಲಕ್ಷ್ಯ ವಹಿಸಲಾಗಿದೆ ಎಂದರು.

ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಶಂಕರ ಮಾಡಲಗಿ, ಮಾಜಿ ಪುರಸಭೆ ಉಪಾಧ್ಯಕ್ಷ ಮಹೇಶ ಹರಕುಣಿ ಮಾತನಾಡಿ, ಸರ್ಕಾರ ತಕ್ಷಣ ಎಚ್ಚೆತ್ತುಕೊಂಡು ಸಮಾಧಿ ಸ್ಥಳ ಸ್ವಚ್ಛಗೊಳಿಸಿ, ಭವ್ಯವಾಗಿ ಅಲಂಕಾರಗೊಳಿಸಿಬೇಕು. ಶಾಲಾ–ಕಾಲೇಜು, ಎನ್ ಸಿಸಿ, ಸ್ಕೌಟ್ ಗೈಡ್ಸ್ ಮಕ್ಕಳ, ಪಥ ಸಂಚಲನ, ರೂಪಕಗಳು ಹಾಗೂ ಚನ್ನಮ್ಮನ ಚರಿತ್ರ ಬಿಂಬಿತ ಇತಿಹಾಸದ ಗೋಷ್ಠಿಗಳು ಹಾಗೂ ಒಂದು ದಿನದ ರಸಮಂಜರಿ, ಕಿರು ನಾಟಕ, ಚನ್ನಮ್ಮನ ಮೇಲಿನ ಜಾನಪದ ಸಾಹಿತ್ಯದ ಹಾಡು, ಲೇಜರ್ ಶೋ, ಭಜನೆ ಮನರಂಜನಾ ಕಾರ್ಯಕ್ರಮ ಹಮ್ಮಿಕೊಳ್ಳಬೇಕು ಎಂದು ತಿಳಿಸಿದರು.

ಸುನಿಲ ಪಾಟೀಲ, ಮಹಾಂತೇಶ ಮತ್ತಿಕೊಪ್ಪ, ಪರ್ವತಗೌಡ ಪಾಟೀಲ, ಈರಣ್ಣ ಬೆಟಗೇರಿ, ಶ್ರೀಶೈಲ ಶರಣಪ್ಪನವರ, ಸುಭಾಷ ತುರಮರಿ, ಮಹೇಶ ಕೊಟಗಿ, ಬಿ.ಬಿ.ಸಂಗನಗೌಡರ, ಶ್ರೀಕಾಂತ ಶಿರಹಟ್ಟಿ, ಸುನಿಲ ಮರಕುಂಬಿ, ಸಿದ್ದರೋಢ ಹೊಂಡಪ್ಪನವರ, ಮಹಾಂತೇಶ ಅಕ್ಕಿ, ಸ್ವಾಭಿಮಾನ ಕ್ರಿಯಾಶೀಲ ಗೆಳೆಯರ ಬಳಗದ ಸದಸ್ಯರು, ಮಾಜಿ ಯೋಧರು ಇದ್ದರು.

# ವಚನ ದರ್ಶನ, ಶರಣರ ಶಕ್ತಿ ನಿಷೇಧಕ್ಕೆ ಆಗ್ರಹ

ವಿಜಯಪುರ, ಅ.18– ಬಸವ ತತ್ವ ಅನುಯಾಯಿಗಳ ಭಾವನೆಗೆ ಧಕ್ಕೆ ತರುವ ವಚನ ದರ್ಶನ ಕೃತಿ ಮುಟ್ಟುಗೋಲು ಹಾಕುವುದು ಮತ್ತು ಶರಣ ಸಂಸ್ಕೃತಿಗೆ ಅಪಮಾನ ಮಾಡುವಂತಹ ಶರಣರ ಶಕ್ತಿ ಚಲನಚಿತ್ರ ನಿಷೇಧಿಸುವಂತೆ ಆಗ್ರಹಿಸಿ ಪುಣೆಯ ಬಸವ ತಿಳುವಳಿಕೆ ಮತ್ತು ಸಂಶೋಧನಾ ಕೇಂದ್ರ ಮತ್ತು ಕಲಬುರ್ಗಿ ಫೌಂಡೇಶನ್ ಪದಾಧಿಕಾರಿಗಳು ಜಿಲ್ಲಾಡಳಿತ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

ಪುಣೆಯ ಬಸವ ತಿಳಿವಳಿಕೆ ಮತ್ತು ಸಂಶೋಧನಾ ಕೇಂದ್ರದ ಅಧ್ಯಕ್ಷ ಶಶಿಕಾಂತ ಪಟ್ಟಣ ಮಾತನಾಡಿ, ಶರಣ–ರ ಅನುಭವ ಮಂಟಪ ಪರಿಕಲ್ಪನೆಯನ್ನು ಬುಡಮೇಲು ಮಾಡುವ ರೀತಿಯಲ್ಲಿ ಕೆಲ ಸಂಪ್ರದಾಯವಾದಿಗಳು ವಚನ ದರ್ಶನ ಕೃತಿ ರಚಿಸಿದ್ದಾರೆ. ಇದು ಲಿಂಗಾಯತ ಸಮಾಜ ಮತ್ತು ಬಸವ ಅನುಯಾಯಿಗಳ ದಿಕ್ಕು ತಪ್ಪಿಸುವ ಕೃತಿಯಾಗಿದೆ ಎಂದರು.

ವಚನ ಸಾಹಿತ್ಯದಲ್ಲಿ ಕಾಯಕ, ಕೃಷಿ, ಆರ್ಥಿಕತೆ, ಸಂಸ್ಕೃತಿ ಹಾಗೂ ಸಾಮಾಜಿಕ ಸಮಾನತೆ ಸಾರಲಾಗಿದೆ. ಜಗತ್ತಿಗೆ ಬೆಳಕು ನೀಡುವ ಸಾಹಿತ್ಯ ವಚನಸಾಹಿತ್ಯ, ಇದನ್ನು ವಿಕೃತ ಮನಸ್ಥಿತಿಯವರು ವಿರೂಪಗೊಳಿಸಿ ಸಮಾಜಕ್ಕೆ ವಚನ ಸಾಹಿತ್ಯದ ಬಗ್ಗೆ ತಪ್ಪು ಹಾಗೂ ಸುಳ್ಳು ಮಾಹಿತಿ ಪ್ರಸಾರ ಮಾಡಲಾಗುತ್ತಿದೆ. ಸರ್ಕಾರ ಅದನ್ನು ತಡೆದು ವಚನ ಸಾಹಿತ್ಯವನ್ನು ಉಳಿಸಬೇಕು ಎಂದರು.

ಶರಣರ ಅಭಿವ್ಯಕ್ತಿಗೆ ಕಳಂಕ ತರುವ, ಬಸವ ಭಕ್ತರ ಭಾವನೆಗೆ ಧಕ್ಕೆ ಉಂಟು ಮಾಡುತ್ತಿರುವ ವಚನ ದರ್ಶನ ಕೃತಿಯನ್ನು ಸರ್ಕಾರ ಕೂಡಲೇ ಮುಟ್ಟುಗೋಲು ಹಾಕಬೇಕು ಎಂದು ಒತ್ತಾಯಿಸಿದರು.



ಶರಣ ಸಂಸ್ಕೃತಿಗೆ ಅಪಮಾನ ಮಾಡುವಂತೆ ಚಿತ್ರಿಕರಿಸಿರುವ ಶರಣ ಶಕ್ತಿ ಚಲನಚಿತ್ರ ಪ್ರದರ್ಶನಕ್ಕೆ ಸರ್ಕಾರ ನಿಷೇಧ ಹೇರಬೇಕು. ಈ ಸಿನೆಮಾ ಮೂಲಕ ಬಸವಣ್ಣನವರ ಚರಿತ್ರೆಗೆ ಕಪ್ಪು ಮಸಿ ಬಳೆಯುವ ಹುನ್ನಾರ ನಡೆಸಗಿದೆ. ಶರಣರ ಬದುಕನ್ನು ಕ್ರೌರ್ಯದಿಂದ, ಅನಾಗರಿಕ ಸಂಭಾಷಣೆಯಿಂದ ಚಿತ್ರಿಕರಿಸಲಾಗಿದೆ ಎಂದು ಆರೋಪಿಸಿದರು. ಶರಣ ಶಕ್ತಿ ಸಿನೆಮಾದ ಕಲೆ ತುಣುಕುಗಳು ಸಾಮಾಜಿಕ ಜಾಲತಾಣದಲ್ಲಿ ಹ–ರಿದಾಡುತ್ತಿದ್ದು, ಅವುಗಳನ್ನು ಸರ್ಕಾರ ತಗೆದಾಕಲು ಸೂಚಿಸಬೇಕು. ಶರಣರಿಗೆ ಅಪಮಾನ ಮಾಡುತ್ತಿರುವರ ವಿರುದ್ಧ ಸರ್ಕಾರ ಸೊಮೋಟೊ ದಾಖಲಿಸಿ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಕಲಬುರ್ಗಿ ಫೌಂಡೇಶನ್ ಅಧ್ಯಕ್ಷ ಶಿವಲಿಂಗಪ್ಪ ಕಲಬುರ್ಗಿ, ಮಾನವ ಬಂಧುತ್ವ ವೇದಿಕೆ ಅಧ್ಯಕ್ಷ ಪ್ರಭುಗೌಡ ಪಾಟೀಲ, ಅಖಿಲ ಭಾರತ ವೀರಶೈವ–ಲಿಂಗಾಯತ ಮಹಾಸಭೆ ಜಿಲ್ಲಾ ಕಾರ್ಯದರ್ಶಿ ಸೋಮಶೇಖರ ಸಾಲಿ, ಗಂಗಾಧರ ಸಾಲಕ್ಕಿ, ಬಿ.ಎಂ. ಬಿರಾದಾರ, ಅನೀಲ ಹೊಸಮನಿ, ಸರಸ್ವತಿ ಪಾಟೀಲ, ಶಾರದಾಮಣಿ ಹುಣಶ್ಯಾಳ, ಮೀನಾಕ್ಷಿ ಪಾಟೀಲ, ಶಾರದಮ್ಮ ಪಾಟೀಲ, ಗೌರಮ್ಮ ನಾಶಿ, ಬಸಮ್ಮ ಭರಶೆಟ್ಟಿ, ಶೈಲಾ ಮಣೂರ, ಸಂಗಪ್ಪ ಪಡನಾಡ, ಕರ್ನಲ್ ಸಂಗಪ್ಪ, ವಿ.ಎ. ಪಾಟೀಲ್, ಶಕುಂತಲಾ ಚಿಂತಾಮಣಿ ಇದ್ದರು.

# ಜಯಂತಿ ಆಚರಣೆಯಲ್ಲಿ ಉಪನ್ಯಾಸ ನೀಡಿ



ಇಂಡಿ, ಅ.18– ಶರಣರ ಹಾಗೂ ದೇಶಕ್ಕಾಗಿ ಹೋರಾಡಿದ ವೀರರ ಜಯಂತಿಗಳನ್ನು ಆಚರಣೆ ಮಾಡುವ ಉದ್ದೇಶ ಹಿಂದಿನ ಇತಿ–ಹಾಸವನ್ನು ಮೆಲುಕು ಹಾಕಿ ಅದನ್ನು ಅರಿತು ಮುನ್ನಡೆಯುವುದಾಗಿದೆ. ಆದರೆ ತಾಲ್ಲೂಕು ಆಡಳಿತದಿಂದ ಕೇವಲ ಭಾವಚಿತ್ರ ಪೂಜೆ ನೆರವೇರಿಸಿ ಕಾರ್ಯಕ್ರಮ ಮೊಟಕುಗೊಳಿಸುತ್ತಿರುವುದು ಸರಿಯಲ್ಲ ಎಂದು ಬಾಳು ಮುಳಜಿ ಹೇಳಿದರು.

ಕಿತ್ತೂರು ರಾಣಿ ಚನ್ನಮ್ಮ ಜಯಂತ್ಯುತ್ಸವದ ಅಂಗವಾಗಿ ಪಟ್ಟಣದ ಆಡಳಿತ ಸೌಧ ಸಭಾಭವನದಲ್ಲಿ ತಹಶೀಲ್ದಾರ್ ವಿ.ಎಸ್. ಕಡಕಭಾವಿ ನೇತೃತ್ವದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು.

ಜಯಂತಿಯಿರುವ ಮಹನೀಯರ ಕು–ರಿತು ಒಂದು ಗಂಟೆ ಉಪನ್ಯಾಸ ಕಾರ್ಯಕ್ರಮ ಕಡ್ಡಾಯವಾಗಿ ಎಲ್ಲಾ ಜಯಂತಿಗಳಲ್ಲಿ ನಡೆಯಬೇಕು ಎಂದು ಸಭೆಯಲ್ಲಿ ಅಯೂಬ್ ನಾಟೀಕಾರ್, ಶರಣಗೌಡ ಬಂಡಿ, ಅಣ್ಣಾರಾವ ಪಾಟೀಲ್ ಒತ್ತಾಯಿಸಿದರು.

ಶಾಲಾ ಕಾಲೇಜುಗಳಲ್ಲಿ ಶಿಕ್ಷಕರು, ಉಪನ್ಯಾಸಕರು ಮಕ್ಕಳಿಗೆ ಜಯಂತಿ ಆಚ–ರಿಸುವ ಹಿನ್ನೆಲೆ, ಮಹನೀಯರ ಕುರಿತು ಉಪನ್ಯಾಸ ನೀಡಬೇಕು ಎಂದರು. ಅಭಿಪ್ರಾಯ ಆಲಿಸಿದ ತಹಶೀಲ್ದಾರ್ ವಿ.ಎಸ್. ಖಡಕಭಾವಿ, ಎಲ್ಲರ ವಿಚಾರ ಆಲಿಸಿದ್ದು ತಮ್ಮ ಸಲಹೆಯಂತೆ ಪ್ರತಿ ಜಯಂತಿಯಂದು ಉಪನ್ಯಾಸ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.

ಉಪತಹಶೀಲ್ದಾರ್ ಬಸವರಾಜ ರಾವೂರ, ಸೇರಿದಂತೆ ತಾಲ್ಲೂಕಿನ ವಿವಿಧ ಇಲಾಖೆಗಳ ಮುಖ್ಯಸ್ಥರು ಇದ್ದರು.

# ಪದವಿಪೂರ್ವ ಕಾಲೇಜುಗಳ ರಾಜ್ಯಮಟ್ಟದ ಟೂರ್ನಿ



ಮೈಸೂರು, ಅ.18– ಬೆಂಗಳೂರು ಉತ್ತರ ಹಾಗೂ ದಕ್ಷಿಣ ತಂಡಗಳು ಇಲ್ಲಿನ ಮೈಸೂರು ವಿಶ್ವವಿದ್ಯಾಲಯದ ಸ್ಪೋರ್ಟ್ಸ್ ಪೆವಿಲಿಯನ್ ನಲ್ಲಿ ಮುಕ್ತಾಯಗೊಂಡ ಪದವಿಪೂರ್ವ ಕಾಲೇಜುಗಳ ರಾಜ್ಯ ಮಟ್ಟದ ಬ್ಯಾಡ್ಮಿಂಟನ್ ಟೂರ್ನಿಯಲ್ಲಿ ಕ್ರಮವಾಗಿ ಬಾಲಕಿಯರು ಹಾಗೂ ಬಾಲಕರ ವಿಭಾಗದಲ್ಲಿ ಚಾಂಪಿಯನ್ ಪಟ್ಟ ಪಡೆದವು.

ಬಾಲಕಿಯರ ವಿಭಾಗದಲ್ಲಿ ಬೆಂಗಳೂರು ಉತ್ತರ ತಂಡದವರು 21ರಿಂದ ಆತಿಥೇಯ ಮೈಸೂರು ತಂಡವನ್ನು ಮಣಿಸಿ ಟ್ರೋಫಿ ಜಯಿಸಿದರು. ಬಾಲಕರ ವಿಭಾಗದಲ್ಲಿ ಬೆಂಗಳೂರು ದಕ್ಷಿಣ ತಂಡ 21 ರಿಂದ ದಕ್ಷಿಣ ಕನ್ನಡ ತಂಡವನ್ನು 21ರಿಂದ ಮಣಿಸಿ ಚಾಂಪಿಯನ್ ಆಯಿತು.

ಬಾಲಕಿಯರ ಸಿಂಗಲ್ಸ್‌ನಲ್ಲಿ ಮೈಸೂರಿನ ದಿಯಾ 218, 218ರಿಂದ ಬೆಂಗಳೂರು ಉತ್ತರದ ಅನನ್ಯಾ ಅವರನ್ನು ಮಣಿಸಿದರೆ, ಡಬಲ್ಸ್‌ನಲ್ಲಿ ಬೆಂಗಳೂರು ಉತ್ತರದ ರುಜುಲಾ ಮೌನಿತಾ ಜೋಡಿ 2113, 2113ರಿಂದ ದಿವ್ಯಾ ಸಿಂಚನಾ ವಿರುದ್ಧ ಗೆದ್ದಿತು. ರಿವರ್ಸ್ ಸಿಂಗಲ್ಸ್‌ನಲ್ಲಿ ರುಜುಲಾ 216, 216ರಿಂದ ಮೈಸೂರಿನ ಅನನ್ಯಾ ವಿರುದ್ಧ ಜಯಗಳಿಸಿದರು.

ಬಾಲಕರ ವಿಭಾಗದ ಸಿಂಗಲ್ಸ್‌ನಲ್ಲಿ ಬೆಂಗಳೂರು ದಕ್ಷಿಣದ ಧ್ಯಾನ್ 215, 215ರಿಂದ ದಕ್ಷಿಣ ಕನ್ನಡದ ಅನ್ಮುಲ್ ವಿರುದ್ಧ ಗೆದ್ದರೆ, ರಿವರ್ಸ್ ಸಿಂಗಲ್ಸ್‌ನಲ್ಲಿ ಕ್ರಿಸ್ 1021, 2111, 2119ರಿಂದ ಭಾವೇಶ್ ಎದುರು ಜಯಿಸಿದರು. ಡಬಲ್ಸ್‌ನಲ್ಲಿ ದಕ್ಷಿಣ ಕನ್ನಡದ ಆರ್ಯ ತಿಲಕ್ 1821, 2114, 2113ರಿಂದ ಬೆಂಗಳೂರು ದಕ್ಷಿಣದ ಸುಮಿತ್ ಕ್ರಿಸ್ ಅವರನ್ನು

# ಸಹಕಾರ ಸಂಘದಿಂದ ಜನರಿಗೆ ಅನುಕೂಲವಾಗಲಿ



ಗುರ್ಲಾಪುರ (ಮೂಡಲಗಿ) , ಅ.18– ಸಹಕಾರ ಸಂಘವನ್ನು ಪ್ರಾರಂಭಿಸುವುದು ಸುಲಭವಾಗಿದ್ದು ಸಂಘವನ್ನು ಜನರಿಗೆ ಅನುಕೂಲವಾಗುವ ರೀತಿಯಲ್ಲಿ ಯಶಸ್ವಿಯಾಗಿ ಮುನ್ನಡೆಸಿಕೊಂಡು ಹೋಗಬೇಕು ಎಂದು ಮೂಡಲಗಿಯ ಶಿವಬೋಧರಂಗ ಮಠದ ದತ್ತಾತ್ರೇಯಬೋಧ ಸ್ವಾಮೀಜಿ ಹೇಳಿದರು.

ತಾಲ್ಲೂಕಿನ ಗುರ್ಲಾಪುರ ಗ್ರಾಮದಲ್ಲಿ ಆರಂಭಗೊಂಡ ವಿಜಯಲಕ್ಷ್ಮಿ ಅರ್ಬನ್ ಕೋ. ಆಪ್ ಸೊಸೈಟಿಯ ಉದ್ಘಾಟನಾ ಸಮಾರಂಭದ ಸಾನ್ನಿಧ್ಯ ವಹಿಸಿ ಮಾತನಾಡಿದ ಅವರು ಆಡಳಿತ ಮಂಡಳಿ, ಸದಸ್ಯರು ಮತ್ತು ಸಿಬ್ಬಂದಿ ಪರಸ್ಪರ ಸಹಕಾರದಿಂದ ಸಾಗಿದರೆ ಸಹಕಾರ ಸಂಘಗಳು ಯಶಸ್ವಿಯಾಗುತ್ತವೆ ಎಂದರು.

ಇಟನಾಳದ ಸಿದ್ಧೇಶ್ವರ ಸ್ವಾಮೀಜಿ ಮಾತನಾಡಿ, ಸಹಕಾರ ಸಂಘಗಳಿಂದ ಪಡೆಯುವ ಸಾಲವನ್ನು  ಸಕಾಲಕ್ಕೆ ಸಂಘಕ್ಕೆ ಮರಳಿಸಿದರೆ ತಾವು ಬೆಳೆಯುವುದರೊಂದಿಗೆ ಸೊಸೈಟಿಯನ್ನು ಬೆಳೆಸಬೇಕು ಎಂದು ಹೇಳಿದರು.

ಸಾನ್ನಿಧ್ಯ ವಹಿಸಿದ್ದ ಸುಣಧೋಳಿಯ ಶಿವಾನಂದ ಸ್ವಾಮೀಜಿ ಮಾತನಾಡಿದರು. ಈರಯ್ಯ ಹಿರೇಮಠ, ಬಸಯ್ಯ ಮೋಜಿನಿದಾರ, ಶಿವರುದ್ರಯ್ಯ ಹಿರೇಮಠ, ಚಿದಾನಂದ ಹಿರೇಮಠ ಇದ್ದರು.


ಪರುತಯ್ಯ ಹಿರೇಮಠ ಅಧ್ಯಕ್ಷತೆವಹಿಸಿದ್ದರು. ಆಡಳಿತ ಮಂಡಳಿ ಸದಸ್ಯರಾದ ಶಿವಬಸು ಕದಂ, ಪುಂಡಲೀಕ ಗೌರಾಣಿ, ಮಲ್ಲಪ್ಪ ಮುಗಳಖೋಡ, ಮಲ್ಲಪ್ಪ ಮುತ್ತಪ್ಪಗೋಳ, ಮಡಿವಾಳಪ್ಪ ನೇಮಗೌಡರ, ಚಂದ್ರು ಝುಂಡೇಕುರಬರ, ಪೂಜಾ ಮೋಜನಿದಾರ, ಗೀತಾ ಪಾದಗಟ್ಟಿ, ಸಂಜೂ ಹಳ್ಳೂರ, ನಾಗೇಂದ್ರ ಗೌರಾಣಿ ಸೇರಿದಂತೆ

# 100ಕ್ಕೂ ಹೆಚ್ಚು ಜನರ ಆರೋಗ್ಯ ತಪಾಸಣೆ

ವಿಜಯಪುರ, ಅ.18– ನಗರದ ಬಿ.ಎಲ್.ಡಿ.ಇ ಆಸ್ಪತ್ರೆಯಲ್ಲಿ ನಡೆದ ಉಚಿತ ಕ್ಯಾನ್ಸರ್ ತಪಾಸಣೆ ಶಿಬಿರವನ್ನು ಹುಬ್ಬಳ್ಳಿಯ ಎಚ್‌ಸಿಜಿ ಕ್ಯಾನ್ಸರ್ ಸೆಂಟರ್‌ನ ತಜ್ಞವೈದ್ಯ ಡಾ.ಶ್ರೀಕಾಂತ ರವಿಚಂದ್ರನ ಉದ್ಘಾಟಿಸಿದರು.

ಬಿ.ಎಲ್.ಡಿ.ಇ ಸಂಸ್ಥೆಯ ಬಿ.ಎಂ.ಪಾಟೀಲ ವೈದ್ಯಕೀಯ ಕಾಲೇಜು, ಆಸ್ಪತ್ರೆ ಮತ್ತು ಸಂಶೋಧನ ಕೇಂದ್ರದ ಸ್ತ್ರೀ ಮತ್ತು ಪ್ರಸೂತಿ ಚಿಕಿತ್ಸಾ, ಶಸ್ತ್ರಚಿಕಿತ್ಸಾ ಹಾಗೂ ಕಿವಿ, ಮೂಗು, ಗಂಟಲು ವಿಭಾಗ ಹಾಗೂ ಹುಬ್ಬಳ್ಳಿಯ ಎಚ್.ಸಿ.ಜಿ ಕ್ಯಾನ್ಸರ್ ಸೆಂಟರ್ ಸಹಯೋಗದಲ್ಲಿ ಶಿಬಿರ ನಡೆಯಿತು.

ಶಿಬಿರದಲ್ಲಿ 100ಕ್ಕೂ ಹೆಚ್ಚು ಜನರು ಆರೋಗ್ಯ ತಪಾಸಣೆ ನಡೆಸಲಾಯಿತು. ಇವರಲ್ಲಿ 56 ಜನರಿಗೆ ಮೆಮೊಗ್ರಾಫಿ, 50 ಜನರಿಗೆ ಪ್ಯಾಪ್ ಸ್ಮಿಯರ್ ತಪಾಸಣೆ ನಡೆಸಲಾಯಿತು.



ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ. ರಾಜೇಶ ಹೊನ್ನುಟಗಿ, ಶಸ್ತ್ರಚಿಕಿತ್ಸೆ ವಿಭಾಗದ ಡಾ. ವಿಜಯಾ ಪಾಟೀಲ, ಡಾ. ಸಂಜೀವ ರಾಠೋಡ, ಡಾ. ಶೈಲೇಶ ಕನ್ನೂರ, ಸ್ತ್ರೀರೋಗ ಮತ್ತು ಪ್ರಸೂತಿ ವಿಭಾಗದ ಡಾ. ರಾಜಶ್ರೀ ಯಳಿವಾಳ, ಡಾ. ಎಸ್. ಆರ್. ಮುದನೂರ, ಕಿವಿ, ಮೂಗು ಹಾಗೂ ಗಂಟಲು ವಿಭಾಗದ ಡಾ. ಶಿವಶಂಕರ ಅಜೂರ, ಆ.ಎಂ.ಒ. ಡಾ. ಅಶೋಕ ತರಡಿ, ವೈದ್ಯರ ತಂಡ ರೋಗಿಗಳ ಆರೋಗ್ಯ ತಪಾಸಣೆ ನಡೆಸಿದರು.

"SUVARN JANANI" Kannada Daily Editor, Printer, Publisher & Owned by Shri. PRAVEEN BHAIRAGOUDA PATIL At : # No. 503/11, Patil Galli Kanabargi, Belagavi-590016, Printed At: at M/s. Laxmi Printers, No. 627, Auto Nagar, Belagavi - 590016. Belagavi, Karnataka State. e-mail suvarnjananinews2022@gmail.com M: 9742347569